ಸಂಪುಟ : 11 ಸಂಚಿಕೆ: 101 ಪುಟ : 4+2 ಬೆಲೆ: 3.00 ಶುಕ್ರವಾರ ಮೇ 22 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 101 Pages : 4+2 Price : 3.00 Friday May 22 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2026–27ನೇ ಸಾಲಿನ ಇಲಾಖೆಯ ಮೆಟ್ರಿಕ್ ನಂತರದ ಪಿ.ಯು.ಸಿ ಕೋರ್ಸ್ ವಿದ್ಯಾರ್ಥಿಗಳಿಗಾಗಿ ವಿದ್ಯಾರ್ಥಿ ನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಕೆಗೆ ಮೇ 25ರಿಂದ ಜೂನ್ 15 ಕೊನೆಯ ದಿನವಾಗಿದೆ.

ವಿದ್ಯಾರ್ಥಿಗಳು [https://shp.karnataka.gov.in/bcwd](https://shp.karnataka.gov.in/bcwd?utm_source=chatgpt.com) ಲಿಂಕ್ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬೇಕು.

ಗದಗ ತಾಲೂಕಿನ ಮೆಟ್ರಿಕ್ ನಂತರದ ಪಿ.ಯು.ಸಿ ಕೋರ್ಸ್ ವಿದ್ಯಾರ್ಥಿಗಳಿಗೆ ಬಾಲಕ ಹಾಗೂ ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ ಪ್ರವರ್ಗ–1 ಹಾಗೂ ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳಿಗೆ ರೂ. 2.50 ಲಕ್ಷ ಹಾಗೂ ಪ್ರವರ್ಗ–2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ ವಿದ್ಯಾರ್ಥಿಗಳಿಗೆ ರೂ. 1 ಲಕ್ಷ ನಿಗದಿಪಡಿಸಲಾಗಿದೆ. ಸಲ್ಲಿಸಬೇಕಾದ ದಾಖಲೆಗಳ ವಿವರ ಹಾಗೂ ಸರ್ಕಾರದ ಆದೇಶಗಳ ಕುರಿತು ಇಲಾಖೆಯ ವೆಬ್‌ಸೈಟ್ [ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ](https://bcwd.karnataka.gov.in/?utm_source=chatgpt.com) ನಲ್ಲಿ ಮಾಹಿತಿ ಪಡೆಯಬಹುದಾಗಿದೆ. ಅರ್ಜಿ ಸಲ್ಲಿಸುವ ವೇಳೆ ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ–ಮೇಲ್ ಮೂಲಕ ಅಥವಾ ಜಿಲ್ಲಾ ಹಾಗೂ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004 ಮತ್ತು 8050770005 ಗೆ ಕರೆ ಮಾಡಬಹುದಾಗಿದೆ.

ಅಲ್ಲದೇ ಗದಗ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಡಾ. ಬಸವರಾಜ ಎಂ. ಬಳ್ಳಾರಿ ಅವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಕವಿವಿ ಪ್ರಸಾರಾಂಗ ನೂತನ ನಿರ್ದೇಶಕರಾಗಿ ಚಂದುನವರ ನೇಮಕ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ವಿಶ್ವವಿದ್ಯಾಲಯದ ಪ್ರಸಾರಾಂಗದ ನೂತನ ನಿರ್ದೇಶಕರಾಗಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಪ್ರಾಧ್ಯಾಪಕ ಡಾ. ಜೆ.ಎಂ. ಚಂದುನವರ ಅವರನ್ನು ನೇಮಕ ಮಾಡಲಾಗಿದೆ. ಹಿಂದಿನ ನಿರ್ದೇಶಕರಾಗಿದ್ದ ಪ್ರೊ. ಎ.ಎಂ. ಕಡಕೋಳ ಅವರಿಂದ ಡಾ. ಚಂದುನವರ ಅವರು ನಿರ್ದೇಶಕ ಹುದ್ದೆಯ ಕಾರ್ಯಭಾರವನ್ನು ಸ್ವೀಕರಿಸಿದರು.

### ಡಾಗ್ ಸ್ಕ್ವಾಡ್‌ನಿಂದ ಸಿ.ಸಿ. ಕ್ಯಾಮೆರಾವರೆಗೆ ಹೈಟೆಕ್ ಅಸ್ತ್ರ ಬಳಕೆ; ಅಪರಾಧ ಚಟುವಟಿಕೆಗಳಿಗೆ ಬ್ರೇಕ್!

# ಗದಗ ಪೊಲೀಸರ ಸ್ಮಾರ್ಟ್ ಆಪರೇಷನ್..!


■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ/ ಗದಗ

ಅಪರಾಧ ಪತ್ತೆ, ಸಾರ್ವಜನಿಕ ಸುರಕ್ಷತೆ ಹಾಗೂ ತ್ವರಿತ ಸೇವೆ ಒದಗಿಸುವ ನಿಟ್ಟಿನಲ್ಲಿ ಗದಗ ಜಿಲ್ಲಾ ಪೊಲೀಸ್ ಇಲಾಖೆ ಕೈಗೊಂಡಿರುವ ಕ್ರಮಗಳು ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆಗೆ ಪಾತ್ರವಾಗುತ್ತಿವೆ. ಕಳ್ಳತನ ಪ್ರಕರಣಗಳ ಪತ್ತೆಯಿಂದ ಹಿಡಿದು ಕಳುವಾದ ಚಿನ್ನಾಭರಣ, ಮೊಬೈಲ್ ಸೇರಿದಂತೆ ವಿವಿಧ ವಸ್ತುಗಳನ್ನು ಮಾಲೀಕರಿಗೆ ಹಿಂತಿರುಗಿಸುವ ಕಾರ್ಯವರೆಗೆ ಹಲವು ಯಶಸ್ವಿ ಕಾರ್ಯಾಚರಣೆಗಳನ್ನು ನಡೆಸುತ್ತಿರುವ ಪೊಲೀಸರು, ಇದೀಗ ಸಾಮಾಜಿಕ ಜಾಲತಾಣಗಳ ಮೂಲಕ ಜನರಲ್ಲಿ ಅರಿವು ಮೂಡಿಸುವ ಕಾರ್ಯಕ್ಕೂ ಹೆಚ್ಚಿನ ಒತ್ತು ನೀಡುತ್ತಿದ್ದಾರೆ.

**ಜಿಲ್ಲೆಯಾದ್ಯಂತ ಸಿ.ಸಿ. ಕ್ಯಾಮರಾ ಕಣ್ಗಾವಲು**

ಅಪರಾಧ ಪ್ರಕರಣಗಳನ್ನು ತ್ವರಿತಗತಿಯಲ್ಲಿ ಪತ್ತೆಹಚ್ಚುವ ಉದ್ದೇಶದಿಂದ ಗದಗ ಜಿಲ್ಲಾ ಪೊಲೀಸ್ ಇಲಾಖೆ ಜಿಲ್ಲೆಯಾದ್ಯಂತ ನೂರಾರು ಸಿ.ಸಿ. ಕ್ಯಾಮೆರಾಗಳನ್ನು ಅಳವಡಿಸಿದೆ. ಪ್ರಮುಖ ರಸ್ತೆ, ವಾಣಿಜ್ಯ ಕೇಂದ್ರ ಹಾಗೂ ಸೂಕ್ಷ್ಮ ಪ್ರದೇಶಗಳಲ್ಲಿ ಕ್ಯಾಮೆರಾ ಕಣ್ಗಾವಲು ಹೆಚ್ಚಿಸಲಾಗಿದ್ದು, ಅಪರಾಧಿಗಳ ಚಲನವಲನಗಳ ಮೇಲೆ ನಿರಂತರ ನಿಗಾ ಇಡಲಾಗಿದೆ.


ಇದರ ಜೊತೆಗೆ ಸೂಕ್ಷ್ಮ ಪ್ರಕರಣಗಳಲ್ಲಿ ಹಾಗೂ ಬಾಂಬ್ ನಿಷ್ಕ್ರಿಯಗೊಳಿಸುವ ಕಾರ್ಯಾಚರಣೆಗಳಲ್ಲಿ ಡಾಗ್ ಸ್ಕ್ವಾಡ್ ಸೇವೆಯನ್ನೂ ಪರಿಣಾಮಕಾರಿಯಾಗಿ



ಬಳಸಿಕೊಳ್ಳಲಾಗುತ್ತಿದೆ. ಈ ಕ್ರಮದಿಂದ ಹಲವು ಕಳ್ಳತನ ಪ್ರಕರಣಗಳನ್ನು ಬೇಧಿಸುವಲ್ಲಿ ಇಲಾಖೆ ಯಶಸ್ಸು ಸಾಧಿಸಿದೆ.

**ಅಪರಾಧ ಚಟುವಟಿಕೆಗಳಿಗೆ ಪೊಲೀಸರ ಬ್ರೇಕ್**

ಅಪರಾಧ ಪ್ರಕರಣಗಳನ್ನು ಪತ್ತೆ ಹಚ್ಚುವುದರ ಜೊತೆಗೆ ಅಪರಾಧ ಚಟುವಟಿಕೆಗಳಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ತನ್ನ ಕಾರ್ಯವೈಖರಿಯಲ್ಲಿ ಹಲವು ಬದಲಾವಣೆಗಳನ್ನು ಮಾಡಿಕೊಂಡಿದೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ನೇತೃತ್ವದಲ್ಲಿ




ಸಾರ್ವಜನಿಕರಿಗೆ ಉತ್ತಮ ಸೇವೆ ನೀಡಲು ಹಲವು ಕ್ರಮಗಳನ್ನು ಜಾರಿಗೆ ತರಲಾಗುತ್ತಿದೆ.

ಪ್ರತಿ ತಾಲೂಕು ಕೇಂದ್ರಗಳಿಗೆ ಭೇಟಿ ನೀಡುತ್ತಿರುವ ಅಧಿಕಾರಿಗಳು, ಪೊಲೀಸ್ ಠಾಣೆಗಳ ಪರಿಶೀಲನೆ ನಡೆಸಿ ಸಿಬ್ಬಂದಿಯ ಅಹವಾಲು ಆಲಿಸುವುದು, ಬಾಕಿ ಪ್ರಕರಣಗಳ ಮಾಹಿತಿ ಪರಿಶೀಲಿಸುವುದು ಹಾಗೂ ಕಾನೂನು ಸುವ್ಯವಸ್ಥೆ ಕುರಿತು ನಿಗಾ ವಹಿಸುವ ಕಾರ್ಯ ಮಾಡುತ್ತಿದ್ದಾರೆ.

ಸಾಮಾಜಿಕ ಜಾಲತಾಣಗಳಲ್ಲಿ ಜಾಗೃತಿ ಅಭಿಯಾನ

> "ಜಿಲ್ಲೆಯಾದ್ಯಂತ ಅಪರಾಧ ಪತ್ತೆ ಹಾಗೂ ಸಾರ್ವಜನಿಕರ ಸುರಕ್ಷತೆಗೆ ಮೊದಲ ಆದ್ಯತೆ ನೀಡಲಾಗಿದೆ. ಆಯ್ದ ಸ್ಥಳಗಳಲ್ಲಿ ಸಿ.ಸಿ. ಕ್ಯಾಮರಾಗಳನ್ನು ಅಳವಡಿಸಿ ಅಪರಾಧ ಪ್ರಕರಣಗಳ ಸಂಖ್ಯೆ ಕಡಿಮೆಗೊಳಿಸಲು ಕ್ರಮ ಕೈಗೊಳ್ಳಲಾಗಿದೆ. ಜಿಲ್ಲೆಯ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಜೊತೆಗೆ ಸಾಮಾಜಿಕ ಜಾಲತಾಣಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ."
>
> **– ರೋಹನ್ ಜಗದೀಶ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಗದಗ**

ಗದಗ ಜಿಲ್ಲಾ ಪೊಲೀಸ್ ಇಲಾಖೆ ಪ್ರತಿಯೊಂದು ಠಾಣಾ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾರ್ಯಾಚರಣೆ, ಅಪರಾಧ ಪತ್ತೆ, ಕಳ್ಳತನ ಪ್ರಕರಣಗಳ ಭೇದನೆ ಹಾಗೂ ಸಾರ್ವಜನಿಕರಿಗೆ ನೀಡುತ್ತಿರುವ ಸೇವೆಗಳ ಕುರಿತು ಸಾಮಾಜಿಕ ಜಾಲತಾಣಗಳ ಮೂಲಕ ನಿರಂತರ ಮಾಹಿತಿ ಹಂಚಿಕೊಳ್ಳುತ್ತಿದೆ.

ಪೊಲೀಸರ ಕಾರ್ಯಚಟುವಟಿಕೆಗಳ ವಿಡಿಯೋ, ಫೋಟೋ ಹಾಗೂ ಮಾಹಿತಿ ಸಾರ್ವಜನಿಕರಿಗೆ ತಲುಪುತ್ತಿರುವ ಹಿನ್ನೆಲೆಯಲ್ಲಿ ಅಧಿಕಾರಿಗಳ ಕಾರ್ಯದಕ್ಷತೆಗೆ ಜಿಲ್ಲೆಯಾದ್ಯಂತ ಮೆಚ್ಚುಗೆ ವ್ಯಕ್ತವಾಗುತ್ತಿದೆ.

### ಸರ್ಕಾರಿ ಶಾಲೆಗೆ ಸೇರುವ ಪ್ರತಿ ಮಗುವಿಗೆ ₹1000 ಠೇವಣಿ–ಸರ್ಕಾರಿ ಶಾಲೆ ಕಡೆಗೆ ಪಾಲಕರ ಸೆಳೆಯಲು ವಿನೂತನ ಐಡಿಯಾ

# ಮಕ್ಕಳ ಭವಿಷ್ಯಕ್ಕೆ ಗುರುಗಳ ಗ್ಯಾರಂಟಿ!

■ವಿಜಯಸಾಕ್ಷಿ ಸುದ್ದಿ, ಡಂಬಳ

ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಿಸಲು ಸರ್ಕಾರ ಮತ್ತು ಶಿಕ್ಷಣ ಇಲಾಖೆ ನಾನಾ ಪ್ರಯತ್ನಗಳನ್ನು ಮಾಡುತ್ತಿರುವ ನಡುವೆಯೇ, ಮುಂಡರಗಿ ತಾಲೂಕಿನ ಕೆಲೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರೊಬ್ಬರು ವಿನೂತನ ಹೆಜ್ಜೆಯ ಮೂಲಕ ಮಾದರಿಯಾಗಿದ್ದಾರೆ.

ಶಾಲೆಗೆ ದಾಖಲೆಯಾಗುವ ಪ್ರತಿಯೊಂದು ಮಗುವಿನ ಹೆಸರಿನಲ್ಲಿ ₹1000 ಫಿಕ್ಸ್ ಡೆಪಾಸಿಟ್ (ಎಫ್‌ಡಿ) ಇಡುವ ಯೋಜನೆ ಜಾರಿಗೆ ತರುವ ಮೂಲಕ ಮುಖ್ಯೋಪಾಧ್ಯಾಯ ಎಸ್.ಎಂ. ಪಾಟೀಲ ಅವರು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

> "ಎಸ್.ಎಂ. ಪಾಟೀಲ ಅವರು ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ್ದಾರೆ. ಮಕ್ಕಳ ಹೆಸರಿನಲ್ಲಿ ₹1000 ಎಫ್‌ಡಿ ಇಡುವ ಯೋಜನೆ ನಿಜಕ್ಕೂ ಪ್ರಶಂಸನೀಯ."
>
> **– ಗಂಗಾಧರ ಅಣ್ಣಿಗೇರಿ, ಬಿಇಒ**



ಈ ಶೈಕ್ಷಣಿಕ ವರ್ಷದಲ್ಲಿ ಕೆಲೂರಿನ ಸರ್ಕಾರಿ ಶಾಲೆಯ 1ನೇ ತರಗತಿಗೆ ದಾಖಲಾಗುವ ಪ್ರತಿ ಮಗುವಿಗೆ 5 ವರ್ಷದ ಅವಧಿಗೆ ₹1000 ಎಫ್‌ಡಿ ಇಡಲು ಎಸ್.ಎಂ. ಪಾಟೀಲ ಅವರು ಸ್ವತಃ ₹10 ಸಾವಿರ ದೇಣಿಗೆಯನ್ನು ಎಸ್‌ಡಿಎಂಸಿ ಸದಸ್ಯರ ಸಮ್ಮುಖದಲ್ಲಿ ಶಾಲೆಗೆ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ದಾಖಲಾತಿ ಹೆಚ್ಚಾದಂತೆ ಇನ್ನಷ್ಟು ಹಣ ನೀಡುವುದಾಗಿ ತಿಳಿಸಿದ್ದಾರೆ.

ಮೂಲತಃ ಗದಗ ತಾಲೂಕಿನ ಅಡವಿಸೋಮಾಪುರ ಗ್ರಾಮದವರಾದ ಸಂಗನಗೌಡ ಎಂ. ಪಾಟೀಲ ಅವರು 1994ರ ಆಗಸ್ಟ್ 12ರಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಕನಕಪುರ ತಾಲೂಕಿನ ಉರಗನದೊಡ್ಡಿ ಶಾಲೆಯಲ್ಲಿ ಶಿಕ್ಷಕರಾಗಿ ಸೇವೆ ಆರಂಭಿಸಿದರು.

▸▸3ನೇ ಪುಟಕ್ಕೆ



> "ಹಿರಿಯ ಅಧಿಕಾರಿಗಳ ಸಲಹೆಯಂತೆ ಕೆಲೂರ ಶಾಲೆಯ 1ನೇ ತರಗತಿಗೆ ದಾಖಲಾಗುವ ಪ್ರತಿ ಮಗುವಿಗೆ ₹1000 ಎಫ್‌ಡಿ ಇಡುತ್ತಿದ್ದೇನೆ. ಗ್ರಾಮಸ್ಥರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲಿಸಬೇಕು."
>
> **–ಎಸ್.ಎಂ. ಪಾಟೀಲ, ಮುಖ್ಯೋಪಾಧ್ಯಾಯರು**

**ವಿಶೇಷ ಆಕರ್ಷಣೆ**

- 1ನೇ ತರಗತಿ ವಿದ್ಯಾರ್ಥಿಗಳಿಗೆ ₹1000 ಎಫ್‌ಡಿ
- 5 ವರ್ಷಗಳ ಅವಧಿಯ ಫಿಕ್ಸ್ ಡೆಪಾಸಿಟ್
- ಮುಖ್ಯೋಪಾಧ್ಯಾಯರಿಂದಲೇ ₹10 ಸಾವಿರ ದೇಣಿಗೆ
- ದಾಖಲಾತಿ ಹೆಚ್ಚಳಕ್ಕೆ ವಿನೂತನ ಪ್ರಯತ್ನ

### ಲಕ್ಷ್ಮೇಶ್ವರ ಸರ್ಕಾರಿ ಆಸ್ಪತ್ರೆಯಲ್ಲಿ ಗಂಟೆಗಟ್ಟಲೆ ಕಾದು ಕುಳಿತ ಪಾಲಕರು; ಸಿಬ್ಬಂದಿ ವರ್ತನೆಗೆ ಆಕ್ರೋಶ

## ಲಸಿಕೆಗಾಗಿ ತಾಯಂದಿರ ಪರದಾಟ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಚಿಕ್ಕಮಕ್ಕಳಿಗೆ ನೀಡುವ ಲಸಿಕಾ ಚುಚ್ಚುಮದ್ದು ಪಡೆಯಲು ಬಂದ ತಾಯಂದಿರು ಮತ್ತು ಪಾಲಕರು ಗುರುವಾರ ಗಂಟೆಗಟ್ಟಲೆ ಕಾಯುವಂತಾದ ಘಟನೆ ನಡೆದಿದೆ. ಸಿಬ್ಬಂದಿಯ ನಿರ್ಲಕ್ಷ್ಯ ಹಾಗೂ ಸ್ಪಂದನೆಯ ಕೊರತೆಯಿಂದ ಪಾಲಕರು ಆಕ್ರೋಶ ವ್ಯಕ್ತಪಡಿಸಿದರು.

ಹೆರಿಗೆಯಾದ ಒಂದು ದಿನದ ಮಗುವಿನಿಂದ ಹಿಡಿದು ಐದು ವರ್ಷದೊಳಗಿನ ಮಕ್ಕಳಿಗೆ ನೀಡುವ ಲಸಿಕೆಗಾಗಿ ಸಾಕಷ್ಟು ಸಂಖ್ಯೆಯಲ್ಲಿ ಬಾಣಂತಿಯರು ಹಾಗೂ ತಾಯಂದಿರು ಆಸ್ಪತ್ರೆಗೆ ಆಗಮಿಸಿದ್ದರು. ಆದರೆ ಲಸಿಕೆ ನೀಡುವ ಪ್ರಕ್ರಿಯೆ ವಿಳಂಬವಾಗಿದ್ದರಿಂದ ಹಲವರು ಮಕ್ಕಳೊಂದಿಗೆ ಗಂಟೆಗಳ ಕಾಲ ಕಾಯಬೇಕಾದ ಪರಿಸ್ಥಿತಿ ಎದುರಾಯಿತು ಎಂದು ಪಾಲಕರು ದೂರಿದರು.

ಪಾಲಕರು ಕಾರಣ ಕೇಳಿದಾಗ



ಕೆಲ ಸಿಬ್ಬಂದಿ ಉಡಾಫೆಯಾಗಿ ವರ್ತಿಸಿ ಮಾತನಾಡಿದ್ದಾರೆ ಎಂಬ ಆರೋಪವೂ ಕೇಳಿಬಂದಿದೆ. "ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕಾದ ಸಿಬ್ಬಂದಿ ಬೇಜವಾಬ್ದಾರಿತನ ತೋರಿದ್ದಾರೆ" ಎಂದು ಗಿರೀಶ ಅಗಡಿ ಆರೋಪಿಸಿದರು.

ಗಾಳಿಯಾಡದ ಕೊಠಡಿಯಲ್ಲಿ ನೂರಾರು ತಾಯಂದಿರು ಹಸುಗೂಸುಗಳನ್ನು ತೊಡೆ–ಯ ಮೇಲೆ ಹಾಕಿಕೊಂಡು ತಮ್ಮ ಸರದಿಗಾಗಿ ಕಾಯುತ್ತಾ ಕುಳಿತಿದ್ದರು. ಮಕ್ಕಳಿಗೆ ಎದೆಹಾಲುಣಿಸಲು ಸಹ ಪ್ರತ್ಯೇಕ ವ್ಯವಸ್ಥೆ ಇಲ್ಲದ ಕಾರಣ ಮಹಿಳೆಯರು ಮುಜುಗರ ಅನುಭವಿಸುವಂತಾಯಿತು ಎಂದು ತಾಯಂದಿರು ಅಸಮಾಧಾನ ವ್ಯಕ್ತಪಡಿಸಿದರು.

ಆಸ್ಪತ್ರೆಯಲ್ಲಿ ಬಾಣಂತಿಯರು ಮತ್ತು ಹಸುಗೂಸುಗಳಿಗೆ ಅನುಕೂಲವಾಗುವಂತೆ ಪ್ರತ್ಯೇಕ ಕೊಠಡಿ ವ್ಯವಸ್ಥೆ ಮಾಡಬೇಕು ಹಾಗೂ ಇಂತಹ ಘಟನೆಗಳು ಮರುಕಳಿಸದಂತೆ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಪಾಲಕರು ಆಗ್ರಹಿಸಿದರು.

### ವಿಧಾನಸೌಧದಲ್ಲಿ ಸಚಿವ ಎಚ್.ಕೆ. ಪಾಟೀಲ ನೇತೃತ್ವದ ಮಹತ್ವದ ಸಭೆ; ಇಸ್ರೋ ಮಾಜಿ ಅಧ್ಯಕ್ಷ ಡಾ. ಕಿರಣಕುಮಾರ ಉಪಸ್ಥಿತಿ

## "ಲಕ್ಕುಂಡಿಯ ರಹಸ್ಯ ಬಿಚ್ಚಿಡಲು ಸ್ಯಾಟಲೈಟ್ ಸರ್ವೆ"

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಾವಿರ ವರ್ಷಗಳ ಇತಿಹಾಸವನ್ನು ಹೊತ್ತಿರುವ ಲಕ್ಕುಂಡಿಯ ಪಾರಂಪರಿಕ ವೈಭವವನ್ನು ಮರು ಅನಾವರಣಗೊಳಿಸಲು ಇದೀಗ ಉಪಗ್ರಹ ತಂತ್ರಜ್ಞಾನದ ಮೊರೆ ಹೋಗಲಾಗಿದೆ. ಮಣ್ಣಿನಡಿ ಅಡಗಿರುವ ಪುರಾತತ್ವ ಸಂಪತ್ತು, ಉತ್ಖನನ ಸ್ಥಳಗಳು ಹಾಗೂ "ನೂರೊಂದು ಗುಡಿನೂರೊಂದು ಭಾವಿ"ಗಳ ಗುರುತು ಪತ್ತೆಗಾಗಿ Satellite Imaging Technique ಬಳಕೆಗೆ ಮಹತ್ವದ ಚರ್ಚೆ ವಿಧಾನಸೌಧದಲ್ಲಿ ನಡೆಯಿತು.

ಮಾನ್ಯ ಎಚ್.ಕೆ. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಬೆಂಗಳೂರಿನ ಎನ್‌ಐಎಎಸ್ (NIAS) ಸಂಸ್ಥೆಯ ತಜ್ಞರು ಭಾಗವಹಿಸಿ, ಲಕ್ಕುಂಡಿ ಪ್ರದೇಶದ ಪುರಾತತ್ವ ಅಧ್ಯಯನವನ್ನು ವೈಜ್ಞಾನಿಕವಾಗಿ ಕೈಗೊಳ್ಳುವ ಕುರಿತು ಸಮಗ್ರ ಚರ್ಚೆ ನಡೆಸಿದರು.

ಸಭೆಯಲ್ಲಿ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ISRO)ಯ ಮಾಜಿ ಅಧ್ಯಕ್ಷ ಡಾ. ಕೆ. ಕಿರಣಕುಮಾರ ಉಪಸ್ಥಿತರಿದ್ದು, ಉಪಗ್ರಹ ಚಿತ್ರಣ ತಂತ್ರಜ್ಞಾನ ಮೂಲಕ ನೆಲದಡಿ ಅಡಗಿರುವ ಪಾರಂಪರಿಕ ಕಟ್ಟಡಗಳು,




ಪುರಾತನ ದೇವಾಲಯಗಳು ಹಾಗೂ ಜಲಸಂಪನ್ಮೂಲಗಳ ಪತ್ತೆಗೆ ಇರುವ ತಾಂತ್ರಿಕ ಸಾಧ್ಯತೆಗಳ ಕುರಿತು ಮಾಹಿತಿ ನೀಡಿದರು.

ಲಕ್ಕುಂಡಿಯ ಐತಿಹಾಸಿಕ ವೈಭವವನ್ನು ಜಾಗತಿಕ ಮಟ್ಟದಲ್ಲಿ ಪರಿಚಯಿಸುವ ಹಾಗೂ ಪಾರಂಪರಿಕ ತಾಣಗಳ ಸಂರಕ್ಷಣೆಗೆ ಆಧುನಿಕ ತಂತ್ರಜ್ಞಾನ ಬಳಕೆಯ ಅಗತ್ಯತೆಯನ್ನು ಸಭೆಯಲ್ಲಿ ಒತ್ತಿಹೇಳಲಾಯಿತು.

"ಲಕ್ಕುಂಡಿ ಕೇವಲ ಒಂದು ಐತಿಹಾಸಿಕ ಗ್ರಾಮವಲ್ಲ; ಅದು ಕರ್ನಾಟಕದ ಸಾಂಸ್ಕೃತಿಕ ಶ್ರೀಮಂತಿಕೆಯ ಪ್ರತೀಕ. ಅದರ ಅಡಗಿರುವ ಇತಿಹಾಸವನ್ನು ಜಗತ್ತಿನ ಮುಂದಿಡುವ ಕೆಲಸ ನಡೆಯಬೇಕು" ಎಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಲಕ್ಕುಂಡಿ ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ ಇದ್ದರು.

## ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷರಾಗಿ ಶರಣಬಸವ ಪಾಟೀಲ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಇತ್ತೀಚೆಗೆ ನಡೆದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಚುನಾವಣೆಯಲ್ಲಿ ಶಿರಹಟ್ಟಿ ತಾಲೂಕು ಅಧ್ಯಕ್ಷರಾಗಿ ಶರಣಬಸವ ಕೆ. ಪಾಟೀಲ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಪ್ರಧಾನ ಕಾರ್ಯದರ್ಶಿಯಾಗಿ ದ್ಯಾಮಪ್ಪ ದ್ಯಾಮಣ್ಣವರ ಹಾಗೂ ಖಜಾಂಚಿಯಾಗಿ ಮೋಹನ ಮಾಂಡ್ರೆ ಆಯ್ಕೆಯಾಗಿದ್ದಾರೆ. ಶರಣಬಸವ ಪಾಟೀಲ ಈ ಹಿಂದೆ 2014-2019ರ ಅವಧಿಯಲ್ಲಿ ತಾಲೂಕು ಶಿಕ್ಷಕರ ಸಂಘದ ಅಧ್ಯಕ್ಷರಾಗಿ ಹಾಗೂ 2019-2025ರ ಅವಧಿಯಲ್ಲಿ ಶಿರಹಟ್ಟಿ ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು.

## ಮೇ 23ರಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಮೇ 31ರಂದು ಗದಗದಲ್ಲಿ ಕನ್ನೇರಿ ಮಠದ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿಗಳ ನೇತೃತ್ವದಲ್ಲಿ ನಡೆಯಲಿರುವ ಬಸವಾದಿ ಶಿವಶರಣರ ಹಿಂದೂ ಸಮಾವೇಶದ ಯಶಸ್ಸಿಗಾಗಿ ಮೇ 23ರಂದು ಸಂಜೆ 5 ಗಂಟೆಗೆ ಶಿರಹಟ್ಟಿಯ ಟೀಚರ್ ಸೊಸೈಟಿಯಲ್ಲಿ ಪೂರ್ವಭಾವಿ ಸಭೆ ಆಯೋಜಿಸಲಾಗಿದೆ.

ತಾಲೂಕಿನ ವಿವಿಧ ಹಿಂದೂ ಸಮಾಜಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಹಿಂದೂ ಸಮಾಜದವರು ಆಗಮಿಸಿ ಸಮಾವೇಶವನ್ನು ಯಶಸ್ವಿಗೊಳಿಸಬೇಕು ಎಂದು ಮುಖಂಡ ಸಂತೋಷ ಕುರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕನಿಷ್ಠ ₹36 ಸಾವಿರ ವೇತನ, ಸೇವಾ ಭದ್ರತೆಗೆ ಆಗ್ರಹ

# ಮೇ 25ರಿಂದ ಹೊರಗುತ್ತಿಗೆ ನೌಕರರ ಅನಿರ್ದಿಷ್ಟ ಮುಷ್ಕರ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ



ಕನಿಷ್ಠ ₹36 ಸಾವಿರ ವೇತನ ಜಾರಿ, ಸೇವಾ ಖಾಯಮಾತಿ ಹಾಗೂ ನಿವೃತ್ತಿವರೆಗೆ ಉದ್ಯೋಗ ಭದ್ರತೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಾಜ್ಯದ ಸರಕಾರಿ ಹಾಸ್ಟೆಲ್ ಹಾಗೂ ವಸತಿ ಶಾಲಾ-ಕಾಲೇಜುಗಳ ಹೊರಗುತ್ತಿಗೆ ನೌಕರರು ಮೇ 25ರಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅನಿರ್ದಿಷ್ಟ ಮುಷ್ಕರ ಆರಂಭಿಸಲಿದ್ದಾರೆ ಎಂದು ಸಂಘದ ಜಿಲ್ಲಾಧ್ಯಕ್ಷ ಮರಡಿ ಜಂಬಯ್ಯ ನಾಯಕ ತಿಳಿಸಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಬುಧವಾರ ನಡೆದ ಹಗರಿಬೊಮ್ಮನಹಳ್ಳಿ, ಹಡಗಲಿ ಹಾಗೂ ಹರಪನಹಳ್ಳಿ ತಾಲೂಕುಗಳ ಸಂಘದ ಪದಾಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ರಾಜ್ಯದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸಂಸ್ಥೆಗಳ ಅಧೀನದ ಕರ್ನಾಟಕ ವಸತಿ ಶಿಕ್ಷಣ ಹಾಸ್ಟೆಲ್‌ಗಳಲ್ಲಿ ಕಳೆದ 15ರಿಂದ 20 ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಸಾವಿರಾರು ನೌಕರರು ಸೇವೆ ಸಲ್ಲಿಸುತ್ತಿದ್ದಾರೆ. ಅಡುಗೆಯವರು, ಅಡುಗೆ ಸಹಾಯಕರು, ಸ್ವಚ್ಛತಾಗಾರರು, ಕಾವಲುಗಾರರು, ಅಟೆಂಡರ್ ಗಳು, ಕಂಪ್ಯೂಟರ್ ಆಪರೇಟರ್‌ಗಳು, ಡಾಟಾ ಎಂಟ್ರಿ ಆಪರೇಟರ್‌ಗಳು ಹಾಗೂ ಅತಿಥಿ ಶಿಕ್ಷಕರು ಯಾವುದೇ ಸೇವಾ ಭದ್ರತೆ ಇಲ್ಲದೆ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು.

> "ಹೊರಗುತ್ತಿಗೆ ನೌಕರರಿಗೆ ಕನಿಷ್ಠ ₹36 ಸಾವಿರ ವೇತನ ಜಾರಿಗೊಳಿಸಬೇಕು. ನಿವೃತ್ತಿವರೆಗೆ ಸೇವಾ ಭದ್ರತೆ ನೀಡಬೇಕು. ಕೆಲಸ ಮಾಡುತ್ತಿರುವ ಸ್ಥಳದಲ್ಲೇ ಖಾಯಂ ಮಾಡಬೇಕು"
>
> **– ಮರಡಿ ಜಂಬಯ್ಯ ನಾಯಕ,** ಅಧ್ಯಕ್ಷರು

ಹೊರಗುತ್ತಿಗೆ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರವನ್ನು ಒತ್ತಾಯಿಸಲು ಮೇ 25ರಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅನಿರ್ದಿಷ್ಟ ಮುಷ್ಕರ ಆರಂಭಿಸಲಾಗುವುದು ಎಂದು ತಿಳಿಸಿದರು.

ಅನಿರ್ದಿಷ್ಟ ಮುಷ್ಕರದ ಪೂರ್ವಭಾವಿಯಾಗಿ ನಡೆದ ಸಭೆಯಲ್ಲಿ ಹಗರಿಬೊಮ್ಮನಹಳ್ಳಿ, ಹಡಗಲಿ ಹಾಗೂ ಹರಪನಹಳ್ಳಿ ತಾಲೂಕುಗಳ ಪದಾಧಿಕಾರಿಗಳು ಭಾಗವಹಿಸಿ, ಹೋರಾಟವನ್ನು ಯಶಸ್ವಿಗೊಳಿಸಲು ತೀರ್ಮಾನಿಸಿದರು.

ಸಭೆಯನ್ನು ಉದ್ದೇಶಿಸಿ ಕರ್ನಾಟಕ ರಾಜ್ಯ ಅಂಗವಿಕಲರು ಹಾಗೂ ಪಾಲಕರ ಒಕ್ಕೂಟದ ರಂಗಪ್ಪ ದಾಸರ್, ಜನವಾದಿ ಮಹಿಳಾ ಸಂಘಟನೆಯ ವಿನೋದ್ (ಸರ್ದಾರ್ ಹುಲಿಗೆಮ್ಮ) ಹಾಗೂ ನೌಕರರ ಒಕ್ಕೂಟದ ರಂಗನಾಥ ಹವಲ್ದಾರ್ ಮಾತನಾಡಿದರು. ವಿವಿಧ ತಾಲೂಕುಗಳ ಪದಾಧಿಕಾರಿಗಳು ಹಾಗೂ ನೌಕರರು ಸಭೆಯಲ್ಲಿ ಉಪಸ್ಥಿತರಿದ್ದರು.

### ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರ 94ನೇ ಜನ್ಮದಿನ ಆಚರಣೆ; ಬಡ ವಿದ್ಯಾರ್ಥಿಗಳಿಗೆ ನೋಟ್ ಬುಕ್ ವಿತರಣೆ

# "ದೇವೇಗೌಡ್ರು ದೇಶ ಕಂಡ ಅಪರೂಪದ ನಾಯಕ"

■ವಿಜಯಸಾಕ್ಷಿ ಸುದ್ದಿ, ಗದಗ




ದೇಶ ಕಂಡ ಅಪರೂಪದ ಮುತ್ಸದ್ದಿ ನಾಯಕ, ಕನ್ನಡದ ಪ್ರಥಮ ಪ್ರಧಾನಮಂತ್ರಿ, ಸಮಾಜವಾದಿ ಹಾಗೂ ರೈತಪರ ಹೋರಾಟಗಾರ ಹೆಚ್.ಡಿ. ದೇವೇಗೌಡ ಅವರ 94ನೇ ಜನ್ಮ ದಿನೋತ್ಸವವನ್ನು ಗದಗದಲ್ಲಿ ಹೆಚ್.ಡಿ. ಕುಮಾರಸ್ವಾಮಿ ಅಭಿಮಾನಿ ಬಳಗ (ರಿ) ವತಿಯಿಂದ ಕೇಕ್ ಕತ್ತರಿಸುವ ಮೂಲಕ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಬಡ ವಿದ್ಯಾರ್ಥಿಗಳಿಗೆ ನೋಟ್‌ಬುಕ್‌ಗಳನ್ನು ವಿತರಿಸಿ ದೇವೇಗೌಡರ ಸಾಮಾಜಿಕ ಕಾಳಜಿಯನ್ನು ಸ್ಮರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಹೆಚ್.ಡಿ.ಕೆ. ಅಭಿಮಾನಿ ಬಳಗದ ಜಿಲ್ಲಾ ಅಧ್ಯಕ್ಷ ಬಸವರಾಜ ಜಕ್ಕಪ್ಪನವರ, "1947ರಲ್ಲಿ ವಿದ್ಯಾರ್ಥಿ ದಶೆಯಿಂದಲೇ ರಾಜಕೀಯ-ಕ್ಕೆ ಕಾಲಿಟ್ಟ ದೇವೇಗೌಡರು, ಜಯಪ್ರಕಾಶ ನಾರಾಯಣರ ಪ್ರಭಾವದಿಂದ ರಾಜಕೀಯ ಜೀವನ ಆರಂಭಿಸಿದರು. ಹಲವು ಏಳುಬೀಳುಗಳ ನಡುವೆ ಶಾಸಕರಾಗಿ, ನೀರಾವರಿ ಸಚಿವರಾಗಿ, ಮುಖ್ಯಮಂತ್ರಿಯಾಗಿ ಹಾಗೂ ದೇಶದ ಪ್ರಧಾನಮಂತ್ರಿಯಾಗಿ ಸೇವೆ ಸಲ್ಲಿಸಿದರು" ಎಂದು ಹೇಳಿದರು.

> "ರಾಜ್ಯದಲ್ಲಿ ಅನೇಕ ನೀರಾವರಿ ಯೋಜನೆಗಳಿಗೆ ಚಾಲನೆ ನೀಡಿ ರೈತರ ನಾಯಕನಾಗಿ ಗುರುತಿಸಿಕೊಂಡ ದೇವೇಗೌಡರು, ದೇಶದ ಮುಕುಟ ಕಾಶ್ಮೀರದಲ್ಲಿ ಯಾವುದೇ ಭದ್ರತೆ ಇಲ್ಲದೆ ಭಾರತದ ಧ್ವಜ ಹಾರಿಸಿದ ಧೀಮಂತ ನಾಯಕ"
>
> **– ಬಸವರಾಜ ಜಕ್ಕಪ್ಪನವರ,**
>
> ಜಿಲ್ಲಾ ಅಧ್ಯಕ್ಷರು, ಹೆಚ್.ಡಿ.ಕೆ. ಅಭಿಮಾನಿ ಬಳಗ

ಜಿಲ್ಲಾ ಹೆಚ್.ಡಿ. ಕುಮಾರಸ್ವಾಮಿ ಅಭಿಮಾನಿ ಬಳಗದ ಪ್ರಧಾನ ಕಾರ್ಯದರ್ಶಿ ಬಸವರಾಜ ದೇಸಾಯಿ ಮಾತನಾಡಿ, "ರೈತರು, ಶ್ರಮಿಕ ವರ್ಗ, ಅಲ್ಪಸಂಖ್ಯಾತರು ಹಾಗೂ ದೀನದಲಿತರ ಪರ ಧ್ವನಿಯಾಗಿ ಕೆಲಸ ಮಾಡಿದ ನಾಯಕ ಹೆಚ್.ಡಿ. ದೇವೇಗೌಡರು" ಎಂದು ಬಣ್ಣಿಸಿದರು.

ಜಿಲ್ಲಾ ಹೆಚ್.ಡಿ.ಕೆ. ಅಭಿಮಾನಿ ಬಳಗದ ಉಪಾಧ್ಯಕ್ಷ ದಾವಲ್ ಎಂ. ಮುಳಗುಂದ ಮಾತನಾಡಿ, "ಹುಬ್ಬಳ್ಳಿಯ ವಿವಾದಿತ ಈದ್ಗಾ ಮೈದಾನದ ಪ್ರಕರಣವನ್ನು ಶಾಂತಿಯುತವಾಗಿ ಬಗೆಹರಿಸಿ ಸರ್ವಜನಾಂಗದ ನಾಯಕನಾಗಿ ದೇವೇಗೌಡರು ಜನಮನ ಗೆದ್ದಿದ್ದಾರೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಆನಂದಗೌಡ ಎಂ.ಡಿ. ಗೌಡರ, ಹವ್ವಣ್ಣೆಪ್ಪ ಗುಜಮಾಗಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಕನ್ನಡ ಸಾಹಿತ್ಯದ ವೈಭವ ಹೆಚ್ಚಿಸಿದ ಪುಲಿಗೆರೆ ನಾಡಿನ ಕವಿಗಳು : ಡಾ. ಕೆ. ರವೀಂದ್ರನಾಥ

# "ಸೋಮೇಶ್ವರ ಶತಕದ ಕವಿ ಪುಲಿಗೆರೆಯ ಸೋಮನಾಥನೇ"

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



"ಸೋಮೇಶ್ವರ ಶತಕವನ್ನು ಬರೆದವರು ಯಾರು ಎಂಬ ಕುರಿತು ಹಲವು ವಿದ್ವಾಂಸರಲ್ಲಿ ಜಿಜ್ಞಾಸೆ ಇತ್ತು. ಆದರೆ ಶಿವಮೂರ್ತಿ ಶಾಸ್ತ್ರಿಗಳು ತಮ್ಮ ಗ್ರಂಥಗಳಲ್ಲಿ ಸ್ಪಷ್ಟವಾಗಿ ಬರೆದು, ಸೋಮೇಶ್ವರ ಶತಕದ ಕರ್ತೃ ಪುಲಿಗೆರೆಯ ಸೋಮನಾಥನೇ ಎಂಬುದನ್ನು ದೃಢಪಡಿಸಿದ್ದಾರೆ" ಎಂದು ಹಂಪಿ ವಿಶ್ವವಿದ್ಯಾಲಯದ ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ. ಕೆ. ರವೀಂದ್ರನಾಥ ಹೇಳಿದರು.

ಪಟ್ಟಣದಲ್ಲಿ ನಡೆದ 'ಪುಲಿಗೆರೆ ಪರಿಸರದ ಪ್ರಾಚೀನ ಕನ್ನಡ ಸಾಹಿತ್ಯ' ರಾಜ್ಯಮಟ್ಟದ ವಿಚಾರ ಸಂಕಿರಣದಲ್ಲಿ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಪುಲಿಗೆರೆ ನಾಡು ಸಾಹಿತ್ಯ, ಸಂಸ್ಕೃತಿ ಹಾಗೂ ಶೈವ ಪರಂಪರೆಯ ತವರೂರಾಗಿದ್ದು, ಈ ನಾಡಿನ ಮಹತ್ವವನ್ನು ಹೆಚ್ಚಿಸಿದವರಲ್ಲಿ ಪುಲಿಗೆರೆ ಸೋಮನಾಥ ಮತ್ತು ಆದಯ್ಯ ಕವಿ ಪ್ರಮುಖರು ಎಂದು ಹೇಳಿದರು.

> "ಪುಲಿಗೆರೆ ಸೋಮನಾಥ ಅವರು ವಚನ ಮತ್ತು ಶೈವ ಭಕ್ತಿ ಪರಂಪರೆಯನ್ನು ಜನರಿಗೆ ತಲುಪಿಸಿದ ಮಹಾನ್ ಕವಿ. ಅವರ ಕೃತಿಗಳು ಧರ್ಮ, ನೈತಿಕತೆ ಹಾಗೂ ಮಾನವೀಯ ಮೌಲ್ಯಗಳನ್ನು ಜನಮನದಲ್ಲಿ ಬಿತ್ತಿವೆ"
>
> **– ಡಾ. ಕೆ. ರವೀಂದ್ರನಾಥ,**

ಸೋಮೇಶ್ವರ ಶತಕವು ಪಂಡಿತರಿಂದ ಹಿಡಿದು ಪಾಮರರವರೆಗೆ ಎಲ್ಲರಿಗೂ ಇಷ್ಟವಾಗುವ ಕೃತಿ. ಜನಸಾಮಾನ್ಯರಿಗೆ ವಿವಿಧ ಉದಾಹರಣೆಗಳ ಮೂಲಕ ನೀತಿ ಬೋಧನೆ ಮಾಡುವ ವಿಶಿಷ್ಟ ಶತಕವಾಗಿದ್ದು, ಅದರ ಮೂಲಕ ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಕಾರ್ಯವನ್ನು ಸೋಮನಾಥ ಮಾಡಿದ್ದಾರೆ ಎಂದು ವಿವರಿಸಿದರು.

"ಸೋಮನಾಥ ಕೇವಲ ವಚನಕಾರರಲ್ಲ, ಅವರು ಸಮಾಜಮುಖಿ ಚಿಂತನೆ ಹೊಂದಿದ ಶ್ರೇಷ್ಠ ಕವಿಯೂ ಆಗಿದ್ದರು" ಎಂದು ಹೇಳಿದರು.

ಆದಯ್ಯ ಕವಿ ಕುರಿತು ಮಾತನಾಡಿದ ಅವರು, ಕನ್ನಡ ಕಾವ್ಯ ಪರಂಪರೆಯಲ್ಲಿ ಆದಯ್ಯ ವಿಶಿಷ್ಟ ಸ್ಥಾನ ಪಡೆದಿದ್ದಾರೆ ಎಂದರು. ಸರಳ ಭಾಷೆಯಲ್ಲಿ ಆಳವಾದ ಅರ್ಥ ಹೊಂದಿದ ಕವನಗಳನ್ನು ರಚಿಸುವ ಮೂಲಕ ಜನಮನ ಗೆದ್ದಿದ್ದಾರೆ ಎಂದು ಹೇಳಿದರು.

ಗ್ರಾಮೀಣ ಬದುಕು, ಭಕ್ತಿ ಹಾಗೂ ಸಾಮಾಜಿಕ ಚಿಂತನೆಗಳು ಅವರ ಸಾಹಿತ್ಯದ ಪ್ರಮುಖ ಅಂಶಗಳಾಗಿವೆ. ಪುಲಿಗೆರೆ ನಾಡಿನ ಸಾಹಿತ್ಯ ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ಈ ಇಬ್ಬರು ಕವಿಗಳ ಸೇವೆ ಅಪಾರವಾಗಿದೆ ಎಂದು ಅಭಿಪ್ರಾಯಪಟ್ಟರು.

### ಇ-ಫಾರ್ಮಸಿ ವಿರುದ್ಧ ಲಕ್ಷ್ಮೇಶ್ವರ-ಶಿರಹಟ್ಟಿ ಮೆಡಿಕಲ್ ವ್ಯಾಪಾರಸ್ಥರ ಆಕ್ರೋಶ

# "ಆನ್‌ಲೈನ್ ಔಷಧಿ ಮಾರಾಟಕ್ಕೆ ಲಾಕ್ ಹಾಕಿ!"

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಆನ್‌ಲೈನ್ ಮೂಲಕ ನಡೆಯುತ್ತಿರುವ ಔಷಧಿ ಮಾರಾಟವನ್ನು ತಕ್ಷಣ ತಡೆಹಿಡಿಯಬೇಕು ಎಂದು ಆಗ್ರಹಿಸಿ ಔಷಧ ವ್ಯಾಪಾರಸ್ಥರ ಸಂಘ ನೀಡಿದ್ದ ಬಂದ್ ಕರೆಗೆ ಬುಧವಾರ ಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ತಾಲೂಕುಗಳಲ್ಲಿ ವ್ಯಾಪಕ ಬೆಂಬಲ ವ್ಯಕ್ತವಾಯಿತು.

ತಾಲೂಕಿನ ಬಹುತೇಕ ಮೆಡಿಕಲ್ ಅಂಗಡಿಗಳು ಸಂಪೂರ್ಣ ಬಂದ್ ಆಗಿದ್ದರಿಂದ ನಿತ್ಯದ ಔಷಧಿಗಾಗಿ ಬಂದ ಸಾರ್ವಜನಿಕರು ಪರದಾಡುವಂತಾಯಿತು. ಆದರೂ ತುರ್ತು ಆರೋಗ್ಯ ಸೇವೆಗೆ ಯಾವುದೇ ತೊಂದರೆಯಾಗದಂತೆ ವ್ಯಾಪಾರಸ್ಥರು ಅಗತ್ಯ ಔಷಧಿ ಪೂರೈಕೆಗೆ ಕ್ರಮ ಕೈಗೊಂಡಿದ್ದರು.

ಅಂಗಡಿಗಳನ್ನು ಬಂದ್ ಮಾಡಿ ಪ್ರತಿಭಟನೆ ನಡೆಸಿದ ಔಷಧ ವ್ಯಾಪಾರಸ್ಥರು ತಹಸೀಲ್ದಾರ್ ಕಚೇರಿಗೆ ತೆರಳಿ ತಹಸೀಲ್ದಾರ್ ಧನಂಜಯ ಎಂ. ಅವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಪ್ರತಿಭಟನೆಯ ವೇಳೆ ಮಾತನಾಡಿದ ತಾಲೂಕು ಔಷಧ ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಚಂದ್ರಶೇಖರಗೌಡ ಪಾಟೀಲ, ಇ-ಫಾರ್ಮಸಿ ಮೂಲಕ ಔಷಧಿ ಮಾರಾಟ ಮಾಡುತ್ತಿರುವ ಕಾರ್ಪೊರೇಟ್ ಕಂಪನಿಗಳು ಭಾರೀ ಪ್ರಮಾಣದ ರಿಯಾಯಿತಿ ನೀಡುವ ಮೂಲಕ ಸ್ಥಳೀಯ ವ್ಯಾಪಾರಸ್ಥರ ಬದುಕಿಗೆ ಸಂಕಷ್ಟ ತಂದಿವೆ ಎಂದು ಆರೋಪಿಸಿದರು.

> "ಆನ್‌ಲೈನ್ ಔಷಧಿ ಮಾರಾಟದಿಂದ ಸ್ಥಳೀಯ ಮೆಡಿಕಲ್ ಅಂಗಡಿಗಳ ವಹಿವಾಟು ಕುಸಿಯುತ್ತಿದೆ. ಸರ್ಕಾರ ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಸಾವಿರಾರು ಔಷಧ ವ್ಯಾಪಾರಸ್ಥರು ನಿರುದ್ಯೋಗಿಗಳಾಗುವ ಪರಿಸ್ಥಿತಿ ಎದುರಾಗಲಿದೆ."
>
> **– ಚಂದ್ರಶೇಖರಗೌಡ ಪಾಟೀಲ,**
>
> ಅಧ್ಯಕ್ಷರು, ತಾಲೂಕು ಔಷಧ ವ್ಯಾಪಾರಸ್ಥರ ಸಂಘ

ಆನ್‌ಲೈನ್ ಔಷಧಿ ಮಾರಾಟದಿಂದ ಸ್ಥಳೀಯ ಮೆಡಿಕಲ್ ಅಂಗಡಿಗಳ ವಹಿವಾಟು ಕುಸಿಯುತ್ತಿದೆ. ಸರ್ಕಾರ ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಸಾವಿರಾರು ಔಷಧ ವ್ಯಾಪಾರಸ್ಥರು ನಿರುದ್ಯೋಗಿಗಳಾಗುವ ಪರಿಸ್ಥಿತಿ ಎದುರಾಗಲಿದೆ ಎಂದು ಹೇಳಿದರು.

ಗದಗ ಜಿಲ್ಲೆಯಲ್ಲಿ ಸುಮಾರು 480ಕ್ಕೂ ಹೆಚ್ಚು ಔಷಧ ಅಂಗಡಿಗಳು ಬಂದ್‌ನಲ್ಲಿ ಭಾಗವಹಿಸಿ ಆನ್‌ಲೈನ್ ಔಷಧಿ ಮಾರಾಟದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿವೆ ಎಂದು ತಿಳಿಸಿದರು.


ಮೆಡಿಕಲ್ ಅಂಗಡಿಗಳು ಬಂದ್ ಆಗಿದ್ದರೂ ಮಾನವೀಯತೆಯ ದೃಷ್ಟಿಯಿಂದ ತುರ್ತು ಸೇವೆಗೆ ಅಗತ್ಯ ಔಷಧಿ ಪೂರೈಕೆ ಮಾಡಲಾಗಿದೆ ಎಂದು ಹೇಳಿದರು.

ಮನವಿ ಸ್ವೀಕರಿಸಿದ ತಹಸೀಲ್ದಾರ್ ಧನಂಜಯ ಎಂ., ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಕಳುಹಿಸಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ವಿನಾಯಕ ಹೆಬ್ಬಳ್ಳಿ, ಆನಂದ ಓದು, ಮಲ್ಲಿಕಾರ್ಜುನ ದೊಡ್ಡೂರ, ಸಿ.ಆರ್. ಪಾಟೀಲ, ಗಂಗಾಧರ ಮೆಕ್ಕಿ, ಶಿವಪುತ್ರಪ್ಪ ಮಲ್ಲಾಡದ, ಪ್ರಕಾಶ ವಡಕಣ್ಣವರ, ಮಲ್ಲಿಕಾರ್ಜುನ ಕೊಟಗಿ, ರಂಗನಾಥ ಬದಿ, ಬಸವರಾಜ ಕೂಸನೂರ, ಜಯಣ್ಣ ಮೇಗಿಲಮನಿ, ಪ್ರಸಾದ ಗುಡಗೇರಿ, ಸಾಹಿಲ್ ಡಿ., ಫಕ್ಕೀರಸ್ವಾಮಿ ದಿಗಂಬರಮಠ, ಎಸ್.ಬಿ. ಮುಳಗುಂದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಕ್ಕೆ ಅಧ್ಯಕ್ಷರಾಗಿ ವ್ಹಿ.ಎಂ. ಹಿರೇಮಠ ಅವಿರೋಧ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ





ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ (ರಿ) ಬೆಂಗಳೂರು, ಗದಗ ಜಿಲ್ಲಾ ಘಟಕದ 2026-2031ನೇ ಅವಧಿಗೆ ನಡೆದ ನೂತನ ಪದಾಧಿಕಾರಿಗಳ ಚುನಾವಣೆಯಲ್ಲಿ ಅಧ್ಯಕ್ಷರಾಗಿ ವ್ಹಿ.ಎಂ. ಹಿರೇಮಠ ಅವರು ಮೂರನೇ ಬಾರಿಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ಬುಧವಾರ ಜರುಗಿದ್ದು, ಪ್ರಧಾನ ಕಾರ್ಯದರ್ಶಿಯಾಗಿ ವಿಶ್ವನಾಥ ಜಿ. ಉಳ್ಳಾಗಡ್ಡಿ, ಕೋಶಾಧ್ಯಕ್ಷರಾಗಿ ಬಿ.ಬಿ. ಹಡಪದ ಆಯ್ಕೆಯಾಗಿದ್ದಾರೆ.

ಉಪಾಧ್ಯಕ್ಷರಾಗಿ ಮಹೇಶ ಎಸ್. ಕುರಿಯವರ ಹಾಗೂ ಶ್ರೀಮತಿ ಬಿ.ಎನ್. ಕ್ಯಾತನಗೌಡರ, ಸಹ ಕಾರ್ಯದರ್ಶಿಯಾಗಿ ಶ್ರೀಮತಿ ಐ.ಕೆ. ಮೋಟಗಿ, ಸಂಘಟನಾ ಕಾರ್ಯದರ್ಶಿಗಳಾಗಿ ಎಸ್. ಎಫ್. ಮಠದ ಹಾಗೂ ಶ್ರೀಮತಿ ಮಧುಮತಿ ಎಸ್. ಕರ್ಜಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಜಿಲ್ಲಾ ಮುಖ್ಯ ಚುನಾವಣಾಧಿಕಾರಿ ಎಸ್.ಬಿ. ಚವಡಿ ತಿಳಿಸಿದ್ದಾರೆ.

"ಶಿಕ್ಷಕರ ಸಂಘದ ಬಲವರ್ಧನೆ ಹಾಗೂ ಶಿಕ್ಷಕರ ಹಿತಾಸಕ್ತಿಗಾಗಿ ನೂತನ ಪದಾಧಿಕಾರಿಗಳು ಇನ್ನಷ್ಟು ಪರಿಣಾಮಕಾರಿ ಕಾರ್ಯ ನಿರ್ವಹಿಸಲಿದ್ದಾರೆ ಎಂಬ ವಿಶ್ವಾಸವಿದೆ" ಎಂದು ಶಿಕ್ಷಕರ ಸಂಘದ ಮುಖಂಡರು ಅಭಿಪ್ರಾಯಪಟ್ಟರು.

ಅವಿರೋಧವಾಗಿ ಆಯ್ಕೆಯಾದ ಎಲ್ಲ ಪದಾಧಿಕಾರಿಗಳಿಗೆ ಜಿಲ್ಲೆಯ ಶಿಕ್ಷಕರು ಅಭಿನಂದನೆ ಸಲ್ಲಿಸಿದ್ದು, ಅವರ ಅಧಿಕಾರಾವಧಿಯಲ್ಲಿ ಸಂಘದ ಅಭಿವೃದ್ಧಿಗೆ ಉತ್ತಮ ಕಾರ್ಯಗಳು ನಡೆಯಲಿ ಎಂದು ಶುಭ ಹಾರೈಸಿದ್ದಾರೆ.

## ಪಿಯುಸಿ ವಿದ್ಯಾರ್ಥಿಗಳಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2026-27ನೇ ಸಾಲಿನ ಮೆಟ್ರಿಕ ನಂತರದ ಪಿ.ಯು.ಸಿ. ಕೋರ್ಸಿನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯ ಪ್ರವೇಶಕ್ಕಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ.

ಗದಗ ಜಿಲ್ಲೆಯ ಬಾಲಕ ಹಾಗೂ ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ ಹಾಗೂ ಪ.ಜಾ./ಪ. ವರ್ಗದ ಪಿಯುಸಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಕೆ ಪ್ರಕ್ರಿಯೆ ಮೇ 25ರಿಂದ ಆರಂಭವಾಗಲಿದ್ದು, ಜೂನ್ 15 ಕೊನೆಯ ದಿನವಾಗಿರುತ್ತದೆ. ವಿದ್ಯಾರ್ಥಿಗಳು [ಸಹಾಯವಾಣಿ ಅರ್ಜಿ ಪೋರ್ಟಲ್] (https://shp.karnataka.gov.in/bcwd/?utm_source=chatgpt.com) ಮೂಲಕ ಅರ್ಜಿ ಸಲ್ಲಿಸಬೇಕು.

ಪ್ರವರ್ಗ-1 ಹಾಗೂ ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ಮಿತಿ ₹2.50 ಲಕ್ಷ ನಿಗದಿಪಡಿಸಲಾಗಿದೆ. ಪ್ರವರ್ಗ-2ಎ, 2ಬಿ, 3ಎ, 3ಬಿ ಹಾಗೂ ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ಮಿತಿ ₹1 ಲಕ್ಷವಾಗಿರಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಅರ್ಜಿ ಸಲ್ಲಿಕೆಗೆ ಅಗತ್ಯ ದಾಖಲೆಗಳು ಹಾಗೂ ಸರ್ಕಾರದ ಆದೇಶಗಳ ವಿವರವನ್ನು [ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವೆಬ್‌ಸೈಟ್] (https://bcwd.karnataka.gov.in/?utm_source=chatgpt.com) ನಲ್ಲಿ ಪಡೆಯಬಹುದಾಗಿದೆ.

ಅರ್ಜಿ ಸಲ್ಲಿಕೆಯಲ್ಲಿ ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ-ಮೇಲ್ ಮೂಲಕ ಅಥವಾ ಸಂಬಂಧಿಸಿದ ಜಿಲ್ಲಾ ಹಾಗೂ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಎಂ.ಎಂ. ತುಂಬರಮಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಸತಿ-ನಿವೇಶನ ರಹಿತರಿಗೆ ಮತ್ತೊಂದು ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

2018ರ ವಸತಿ ರಹಿತ ಹಾಗೂ ನಿವೇಶನ ರಹಿತರ ಸಮೀಕ್ಷೆಯಲ್ಲಿ ಕೈಬಿಟ್ಟು ಹೋಗಿದ್ದ ಅರ್ಹ ಫಲಾನುಭವಿಗಳಿಗೆ ಇದೀಗ ಮತ್ತೊಮ್ಮೆ ಅವಕಾಶ ಕಲ್ಪಿಸಲಾಗಿದೆ. ಗ್ರಾಮ ಪಂಚಾಯತಿ ಲಾಗಿನ್‌ನಲ್ಲಿ ಅರ್ಹರ ವಿವರ ನಮೂದಿಸಲು ಅವಕಾಶ ನೀಡಲಾಗಿದ್ದು, ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನವಾಗಿದೆ ಎಂದು ಜಿಲ್ಲಾ ಪಂಚಾಯತ್ ಪ್ರಕಟಣೆ ತಿಳಿಸಿದೆ. ವಸತಿ ಹಾಗೂ ನಿವೇಶನಕ್ಕಾಗಿ ಅರ್ಜಿ ಸಲ್ಲಿಸುವವರು ಆಧಾರ್ ಕಾರ್ಡ್, ಪಡಿತರ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಚುನಾವಣಾ ಗುರುತಿನ ಚೀಟಿ, ಭಾವಚಿತ್ರ ಹಾಗೂ ಬ್ಯಾಂಕ್ ಪಾಸ್‌ಬುಕ್ ಸೇರಿದಂತೆ ಅಗತ್ಯ ದಾಖಲೆಗಳನ್ನು ಹೊಂದಿರಬೇಕು.

ಅರ್ಹರು ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಿ ಸರ್ಕಾರದ ವಸತಿ ಸೌಲಭ್ಯ ಪಡೆಯಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಮಕ್ಕಳ ಭವಿಷ್ಯಕ್ಕೆ ಗುರುಗಳ ಗ್ಯಾರಂಟಿ!

▶▶ ಮೊದಲನೇ ಪುಟದಿಂದ

ಬಳಿಕ ಡಂಬಳ ಡಿಪಿಇಪಿ ಶಾಲೆಯಲ್ಲಿ 12 ವರ್ಷ ಹಾಗೂ ಲಕ್ಕುಂಡಿ ಸರ್ಕಾರಿ ಶಾಲೆಯಲ್ಲಿ 10 ವರ್ಷ ಸೇವೆ ಸಲ್ಲಿಸಿದ್ದಾರೆ.

ಪ್ರಸ್ತುತ ಕದಾಂಪುರ ಕ್ಲಸ್ಟರ್‌ನ ಸಿಆರ್‌ಪಿಯಾಗಿಯೂ, ಕೆಲೂರಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾಗಿಯೂ ಕಾರ್ಯನಿರ್ವಹಿಸುತ್ತಿದ್ದಾರೆ.

ದಾನಿಗಳ ಸಹಕಾರದಿಂದ ₹14 ಲಕ್ಷಕ್ಕೂ ಹೆಚ್ಚು ಹಣ ಸಂಗ್ರಹಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಬಳಸಿರುವುದು ಅವರ ಮತ್ತೊಂದು ವಿಶೇಷತೆ. ಬೋಧನಾ ಕೌಶಲ್ಯದ ಮೂಲಕ ಸಾವಿರಾರು ಗ್ರಾಮೀಣ ವಿದ್ಯಾರ್ಥಿಗಳ ಭವಿಷ್ಯ ರೂಪಿಸಿರುವ ಎಸ್.ಎಂ. ಪಾಟೀಲ ಅವರಿಗೆ "ಜನಮೆಚ್ಚಿದ ಶಿಕ್ಷಕ", "ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ" ಸೇರಿದಂತೆ ಹಲವು ಪ್ರಶಸ್ತಿಗಳು ಲಭಿಸಿವೆ.

## ವಸತಿ-ನಿವೇಶನ ರಹಿತರಿಗೆ ಮತ್ತೊಂದು ಅವಕಾಶ

■ ವಿಜಯಸಾಕ್ಷಿ ಸುದ್ದಿ, ಗದಗ

2018ರ ವಸತಿ ರಹಿತ ಹಾಗೂ ನಿವೇಶನ ರಹಿತರ ಸಮೀಕ್ಷೆಯಲ್ಲಿ ಕೈಬಿಟ್ಟು ಹೋಗಿದ್ದ ಅರ್ಹ ಫಲಾನುಭವಿಗಳಿಗೆ ಇದೀಗ ಮತ್ತೊಮ್ಮೆ ಅವಕಾಶ ಕಲ್ಪಿಸಲಾಗಿದೆ. ಗ್ರಾಮ ಪಂಚಾಯತಿ ಲಾಗಿನ್‌ನಲ್ಲಿ ಅರ್ಹರ ವಿವರ ನಮೂದಿಸಲು ಅವಕಾಶ ನೀಡಲಾಗಿದ್ದು, ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನವಾಗಿದೆ ಎಂದು ಜಿಲ್ಲಾ ಪಂಚಾಯತ್ ಪ್ರಕಟಣೆ ತಿಳಿಸಿದೆ. ವಸತಿ ಹಾಗೂ ನಿವೇಶನಕ್ಕಾಗಿ ಅರ್ಜಿ ಸಲ್ಲಿಸುವವರು ಆಧಾರ್ ಕಾರ್ಡ್, ಪಡಿತರ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಚುನಾವಣಾ ಗುರುತಿನ ಚೀಟಿ, ಭಾವಚಿತ್ರ ಹಾಗೂ ಬ್ಯಾಂಕ್ ಪಾಸ್‌ಬುಕ್ ಸೇರಿದಂತೆ ಅಗತ್ಯ ದಾಖಲೆಗಳನ್ನು ಹೊಂದಿರಬೇಕು. ಅರ್ಹರು ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಿ ಸರ್ಕಾರದ ವಸತಿ ಸೌಲಭ್ಯ ಪಡೆಯಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಕಸಾಯಿಖಾನೆ ವಿರುದ್ಧ ಹಿಂದೂ ಸಂಘಟನೆಗಳ ಮುತ್ತಿಗೆ, ಕ್ರಮಕ್ಕೆ ಆಗ್ರಹ

# ಪುರಸಭೆ ಜಾಗದಲ್ಲೇ ಗೋಹತ್ಯೆ ಆರೋಪ!

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಹಳೆ ಆಸಾರ ಓಣಿಯ ಪುರಸಭೆ ಜಾಗೆಯಲ್ಲಿ ಪರವಾನಗಿ ಇಲ್ಲದೆ ಅಕ್ರಮವಾಗಿ ನಡೆಸಲಾಗುತ್ತಿರುವ ಕಸಾಯಿಖಾನೆಯಲ್ಲಿ ಗೋಹತ್ಯೆ ನಡೆಸಿ ಮಾಂಸ ಮಾರಾಟ ಮಾಡಲಾಗುತ್ತಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಗುರುವಾರ ಲಕ್ಷ್ಮೇಶ್ವರದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು.

ನೂರಾರು ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಕಸಾಯಿಖಾನೆಯ ಬಳಿ ಜಮಾಯಿಸಿ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಅಕ್ರಮ ಕಸಾಯಿಖಾನೆಯನ್ನು ಕೂಡಲೇ ಬಂದ್ ಮಾಡಿಸಿ, ಸಂಬಂಧಪಟ್ಟವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದರು.

ಶ್ರೀರಾಮ ಸೇನೆಯ ತಾಲೂಕು ಅಧ್ಯಕ್ಷ ಈರಣ್ಣ ಪೂಜಾರ ನೀಡಿದ ದೂರಿನ ಪ್ರಕಾರ, ಬಲ್ಲ ಮೂಲಗಳ ಮಾಹಿತಿ ಮೇರೆಗೆ ಯುವಕರೊಂದಿಗೆ ಸ್ಥಳಕ್ಕೆ ತೆರಳಿದಾಗ 8ರಿಂದ 10 ಆಕಳುಗಳನ್ನು ಕಡಿಯಲಾಗುತ್ತಿರುವ ದೃಶ್ಯ ಕಂಡು ಬಂದಿದೆ ಎಂದು ಆರೋಪಿಸಲಾಗಿದೆ. ಪ್ರಶ್ನಿಸಲು ಹೋದಾಗ ಕಸಾಯಿಖಾನೆಯಲ್ಲಿದ್ದವರು ಮಾರಕಾಸ್ತ್ರಗಳಿಂದ ಹಲ್ಲೆಗೆ ಯತ್ನಿಸಿದ್ದಾರೆ ಎನ್ನಲಾಗಿದೆ.



ಬಳಿಕ ಪೊಲೀಸರೊಂದಿಗೆ ಸ್ಥಳಕ್ಕೆ ತೆರಳಿದ ಯುವಕರು, ಆಕಳು, ಎತ್ತು ಹಾಗೂ ಎಮ್ಮೆಗಳನ್ನು ಕಡಿಯಲಾಗಿರುವ ದೃಶ್ಯಗಳನ್ನು ತೋರಿಸಿ ಆಕ್ರೋಶ ವ್ಯಕ್ತಪಡಿಸಿದರು.

*ಮಾತಿನ ಚಕಮಕಿ, ಉದ್ವಿಗ್ನ ವಾತಾವರಣ*

ಘಟನಾ ಸ್ಥಳದಲ್ಲಿ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಹಾಗೂ ಕಸಾಯಿಖಾನೆ ಸಿಬ್ಬಂದಿ ನಡುವೆ ಮಾತಿನ ಚಕಮಕಿ ನಡೆಯಿತು. ಪರಿಸ್ಥಿತಿ ಉದ್ವಿಗ್ನಗೊಂಡ ಹಿನ್ನೆಲೆಯಲ್ಲಿ ಪೊಲೀಸರು ಸ್ಥಳದಲ್ಲಿ ಬಿಗಿ ಬಂದೋಬಸ್ತ್ ಏರ್ಪಡಿಸಿದರು.

ಈ ವೇಳೆ ಓರ್ವ ಕಸಾಯಿಖಾನೆಯ ಸಿಬ್ಬಂದಿ ಅಂಗಡಿ ಬಂದ್ ಮಾಡಿ ಅಲ್ಲಿಂದ ತೆರಳಿದ್ದಾನೆ ಎಂದು ತಿಳಿದು ಬಂದಿದೆ.

ಬಸವರಾಜ ಚಕ್ರಸಾಲಿ ಮಾತನಾಡಿ, "ಪಟ್ಟಣದಲ್ಲಿ ಹಲವು ವರ್ಷಗಳಿಂದ ಅಕ್ರಮ ಕಸಾಯಿಖಾನೆ, ಗೋ ಸಾಗಾಣಿಕೆ ಹಾಗೂ ಅನಧಿಕೃತ ಮಾಂಸ ಮಾರಾಟ ನಡೆಯುತ್ತಿದ್ದರೂ ಪುರಸಭೆ ಮತ್ತು ಪೊಲೀಸರು ಕಣ್ಮುಚ್ಚಿ ಕುಳಿತಿರುವುದು ಸಾರ್ವಜನಿಕರ ಅನುಮಾನಕ್ಕೆ ಕಾರಣವಾಗಿದೆ" ಎಂದು ಆರೋಪಿಸಿದರು.

ಸ್ಥಳೀಯರ ಪ್ರಕಾರ, ಪುರಸಭೆ ಜಾಗವನ್ನು ಹಲವು ವರ್ಷಗಳಿಂದ ಅಕ್ರಮವಾಗಿ ಬಳಸಲಾಗುತ್ತಿದ್ದು, ಇದರಿಂದ ಪರಿಸರ ಮಾಲಿನ್ಯ ಹಾಗೂ ದುರ್ವಾಸನೆ ಸಮಸ್ಯೆ ಹೆಚ್ಚಾಗಿದೆ ಎಂದು ದೂರಲಾಗಿದೆ.

*ಕ್ರಮದ ಭರವಸೆ ನೀಡಿದ ಪೊಲೀಸರು*

> "ಹಿಂದೂಗಳ ಪೂಜ್ಯನೀಯ ಆಕಳುಗಳನ್ನು ಹತ್ಯೆ ಮಾಡುತ್ತಿರುವುದನ್ನು ಸಹಿಸುವ ಪ್ರಶ್ನೆಯೇ ಇಲ್ಲ. ಅಕ್ರಮ ಕಸಾಯಿಖಾನೆ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಉಗ್ರ ಹೋರಾಟ ಅನಿವಾರ್ಯವಾಗಲಿದೆ."
> – **ಈರಣ್ಣ ಪೂಜಾರ,**
> ತಾಲೂಕು ಅಧ್ಯಕ್ಷ, ಶ್ರೀರಾಮ ಸೇನೆ

ಸಿಪಿಐ ಬಿ.ವೈ. ನ್ಯಾಮಗೌಡ ಹಾಗೂ ಪಿಎಸ್‌ಐ ನಾಗರಾಜ ಗಡದ ಸ್ಥಳಕ್ಕೆ ಭೇಟಿ ನೀಡಿ ಪ್ರತಿಭಟನಾಕಾರರನ್ನು ಸಮಾಧಾನಪಡಿಸಿದರು. ಪ್ರಕರಣದ ಕುರಿತು ಪರಿಶೀಲನೆ ನಡೆಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಘಟನೆಯ ಗಂಭೀರತೆ ಅರಿತು ಸ್ಥಳಕ್ಕೆ ಆಗಮಿಸಿದ ಡಿವೈಎಸ್‌ಪಿ ಮುರ್ತುಜಾ ಖಾದ್ರಿ ಸ್ಥಳ ಪರಿಶೀಲನೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಮುತ್ತು ಕರ್ಜೆಕಣ್ಣವರ, ಅಮರೀಶ ಗಾಂಜಿ, ಪ್ರತಾಪ ಅಂಕಲಿ, ಪ್ರಾಣೇಶ ವ್ಯಾಪಾರಿ, ನವೀನ ಹಿರೇಮಠ, ಪ್ರವೀಣ ಬೋಮಲೆ, ವಿಜಯ ಕುಂಬಾರ, ಚಿನ್ನು ಹಾಳದೋಳದ, ವಾಸು ಗೋಸಾವಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ಆನ್‌ಲೈನ್ ಔಷಧಿ ಮಾರಾಟ ವಿರುದ್ಧ ಶಿರಹಟ್ಟಿಯಲ್ಲಿ ಮೆಡಿಕಲ್ ಅಂಗಡಿಗಳ ಸಾಂಕೇತಿಕ ಬಂದ್

## "ಅಕ್ರಮ ಇ-ಫಾರ್ಮಸಿಗೆ ಕಡಿವಾಣ ಹಾಕಿ!"



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಔಷಧಿಗಳ ಅಕ್ರಮ ಆನ್‌ಲೈನ್ ಮಾರಾಟವನ್ನು ತಕ್ಷಣ ನಿಷೇಧಿಸಬೇಕು ಎಂದು ಆಗ್ರಹಿಸಿ ಲಕ್ಷ್ಮೇಶ್ವರ-ಶಿರಹಟ್ಟಿ ತಾಲೂಕಿನ ಔಷಧ ವಿತರಕರ ಸಂಘದ ವತಿಯಿಂದ ಬುಧವಾರ ಸಾಂಕೇತಿಕ ಬಂದ್ ನಡೆಸಿ ತಹಶೀಲ್ದಾರರಿಗೆ ಮನವಿ ಸಲ್ಲಿಸಲಾಯಿತು.

ಶಿರಹಟ್ಟಿಯಲ್ಲಿ ನಡೆದ ಪ್ರತಿಭಟನೆಯಲ್ಲಿ ಔಷಧ ವಿತರಕರು, ರಸಾಯನಶಾಸ್ತ್ರಜ್ಞರು ಹಾಗೂ ಔಷಧಶಾಸ್ತ್ರಜ್ಞರು ಭಾಗವಹಿಸಿ ಆನ್‌ಲೈನ್ ಔಷಧಿ ಮಾರಾಟದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಡಾ. ಪವನ ತುಕಾರಾಮ ಮಹೇಂದ್ರಕರ, ಅಕ್ರಮ ಆನ್‌ಲೈನ್ ಔಷಧಿ ಮಾರಾಟದ ವಿರುದ್ಧ ದೀರ್ಘಕಾಲದಿಂದ ಸಂಘಟನೆ ವತಿಯಿಂದ ಸರ್ಕಾರ ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗುತ್ತಿದೆ. ಆದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಆರೋಪಿಸಿದರು.

> "ಅಕ್ರಮ ಹಾಗೂ ಅನಿಯಂತ್ರಿತ ಆನ್‌ಲೈನ್ ಔಷಧಿ ಮಾರಾಟವು ರೋಗಿಗಳ ಆರೋಗ್ಯಕ್ಕೆ ಮಾತ್ರವಲ್ಲ, ಪರವಾನಗಿ ಪಡೆದ ಔಷಧ ವ್ಯಾಪಾರಸ್ಥರ ಉಳಿವಿಗೂ ದೊಡ್ಡ ಬೆದರಿಕೆಯಾಗಿದೆ"
> – **ಡಾ. ಪವನ ಮಹೇಂದ್ರಕರ,** ವ್ಯಾಪಾರಸ್ಥ

ಆನ್‌ಲೈನ್ ಮೂಲಕ ವೈದ್ಯಕೀಯ ಸಮಾಲೋಚನೆ ಇಲ್ಲದೇ ಔಷಧಿಗಳ ಮನೆ ವಿತರಣೆ, ನಕಲಿ ಇ-ಪ್ರಿಸ್ಕ್ರಿಪ್ಷನ್ ಬಳಕೆ ಹಾಗೂ ಅತಿಯಾದ ರಿಯಾಯಿತಿ ಪದ್ಧತಿಗಳು ಸಾರ್ವಜನಿಕ ಆರೋಗ್ಯಕ್ಕೆ ಗಂಭೀರ ಅಪಾಯ ಉಂಟು ಮಾಡುತ್ತಿವೆ ಎಂದು ಹೇಳಿದರು.

ಪರಿಶೀಲಿತ ವೈದ್ಯಕೀಯ ಪ್ರಿಸ್ಕ್ರಿಪ್ಷನ್ ಇಲ್ಲದೇ ಔಷಧಿಗಳ ಮಾರಾಟ ಮತ್ತು ವಿತರಣೆಯನ್ನು ಸಂಪೂರ್ಣ ನಿಷೇಧಿಸಬೇಕು. ಜಿಎಸ್‌ಆರ್ 817(ಇ) ಮತ್ತು ಜಿಎಸ್‌ಆರ್ 220(ಇ) ನಿಯಮಗಳನ್ನು ತಕ್ಷಣ ಹಿಂಪಡೆಯಬೇಕು. ಆನ್‌ಲೈನ್ ಪ್ಲಾಟ್‌ಫಾರ್ಮ್‌ಗಳ ಲೂಟಿಕೋರ ರಿಯಾಯಿತಿ ನೀತಿಗೆ ಸರ್ಕಾರ ಕಡಿವಾಣ ಹಾಕಬೇಕು ಎಂದು ಮನವಿ ಮೂಲಕ ಒತ್ತಾಯಿಸಲಾಯಿತು.

ಪ್ರತಿಭಟನೆಯಲ್ಲಿ ಡಾ. ಸುನೀಲ್ ಬುರಬುರೆ, ಪವನ ನರಗುಂದ, ಭೂಪಾಲ ಆಲೂರ, ಸಾಗರ ಮಹೇಂದ್ರಕರ, ಡಾ. ಗೋನಾಳ, ಫಕ್ಕೀರಡ್ಡಿ ಮರಡ್ಡಿ, ಸಾಗರ ಹಿರೇಗೌಡರ, ದತ್ತಾತ್ರೇಯ ಬಿಜಾಪೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ನಾಳೆ ಲಿವರ್ ಆರೋಗ್ಯ ಉಚಿತ ತಪಾಸಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾವಸಾರ ವಿಜನ್ ಇಂಡಿಯಾ ಗದಗ ಹಾಗೂ ಲಯನ್ಸ್ ಕ್ಲಬ್ ಆಫ್ ಗದಗ-ಬೆಟಗೇರಿ ಸಹಯೋಗದಲ್ಲಿ ಗದಗ-ಬೆಟಗೇರಿ ಭಾವಸಾರ ಕುಟುಂಬ ಮತ್ತು ಅವರ ಅವಲಂಬಿತ ಕುಟುಂಬದವರಿಗೆ ಉಚಿತ ಲಿವರ್ ಫೈಬ್ರೊ ಸ್ಕ್ಯಾನಿಂಗ್ ಪರೀಕ್ಷಾ ಶಿಬಿರವನ್ನು ಆಯೋಜಿಸಲಾಗಿದೆ.

ಮೇ 23ರಂದು ಶನಿವಾರ ಗದಗದ ಹಳೇ ಕೋರ್ಟ್ ಸಮೀಪದ ಲಯನ್ಸ್ ಕ್ಲಬ್ ಹಾಲ್‌ನಲ್ಲಿ ಮುಂಜಾನೆ 9.30ರಿಂದ ಸಂಜೆ 6 ಗಂಟೆಯವರೆಗೆ ಶಿಬಿರ ನಡೆಯಲಿದೆ. 50 ವರ್ಷ ಮೇಲ್ಪಟ್ಟ ಸದಸ್ಯರಿಗೆ ಪ್ರಥಮ ಆದ್ಯತೆ ನೀಡಲಾಗುವುದು. ಜೊತೆಗೆ ಹಿರಿಯ ನಾಗರಿಕರು ಹಾಗೂ ಈಗಾಗಲೇ ರೋಗ ನಿರ್ಣಯದ ದಾಖಲೆ ಹೊಂದಿರುವವರಿಗೆ ವಿಶೇಷ ಆದ್ಯತೆ ಕಲ್ಪಿಸಲಾಗುತ್ತದೆ ಎಂದು ಪ್ರಕಟಣೆ ತಿಳಿಸಿದೆ.

ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶಿಬಿರದ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಭಾವಸಾರ ವಿಜನ್ ಇಂಡಿಯಾ ಗದಗ ಕಾರ್ಯದರ್ಶಿ ಶ್ರೀಮತಿ ಸುಧಾ ಶ್ರೀಪಾದ ವೈಕುಂಠೆ ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಶ್ರೀಪಾದ ವೈಕುಂಠೆ (9448903482), ಡಾ. ಪ್ರವೀಣ ಸರ್ವದೆ (9886946048) ಹಾಗೂ ಅಶ್ವಥ ಸುಲಾಖೆ (9880069309) ಅವರನ್ನು ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

## ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾಗಿ ಎಸ್.ಆರ್. ಬಂಡಿ ಅವಿರೋಧ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ (ರಿ) ಬೆಂಗಳೂರು, ಗದಗ ಗ್ರಾಮೀಣ ಘಟಕದ 2026-2031ನೇ ಅವಧಿಗೆ ನೂತನ ಪದಾಧಿಕಾರಿಗಳ ಆಯ್ಕೆಗಾಗಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಎಸ್.ಆರ್. ಬಂಡಿ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಪ್ರಧಾನ ಕಾರ್ಯದರ್ಶಿಯಾಗಿ ಎನ್.ಎಚ್. ಪಾಟೀಲ, ಕೋಶಾಧ್ಯಕ್ಷರಾಗಿ ಎಸ್.ಎಸ್. ಲಕ್ಷೊಪ್ಪ ಉಪಾಧ್ಯಕ್ಷರಾಗಿ ಎಸ್.ಪಿ. ಕುರಿ ಹಾಗೂ ಶ್ರೀಮತಿ ಎಸ್.ಡಿ. ಗುಂಜಳ ಆಯ್ಕೆಯಾಗಿದ್ದಾರೆ. ಸಹ ಕಾರ್ಯದರ್ಶಿಗಳಾಗಿ ಎಸ್.ಎಂ. ಉಜ್ಜಣ್ಣವರ ಮತ್ತು ಶ್ರೀಮತಿ ಎನ್.ಆರ್. ಶೈಲಾ, ಸಂಘಟನಾ ಕಾರ್ಯದರ್ಶಿಗಳಾಗಿ ಬಿ.ವಾಯ್. ಹಡೇದಮನಿ ಹಾಗೂ ಶ್ರೀಮತಿ ಎಸ್.ಎನ್. ಅನ್ಸಾರಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷರ ಸಂಘ ಗದಗ ಗ್ರಾಮೀಣ ಘಟಕದ ಮುಖ್ಯ ಚುನಾವಣಾಧಿಕಾರಿ ವ್ಹಿ.ಎಂ. ಪಾಟೀಲ ತಿಳಿಸಿದ್ದಾರೆ. ಅವಿರೋಧವಾಗಿ ಆಯ್ಕೆಯಾದ ಎಲ್ಲ ಪದಾಧಿಕಾರಿಗಳಿಗೆ ಗದಗ ಗ್ರಾಮೀಣ ಪ್ರಾಥಮಿಕ ಶಾಲಾ ಶಿಕ್ಷಕರು ಅಭಿನಂದನೆ ಸಲ್ಲಿಸಿದ್ದು, ಇವರ ಅಧಿಕಾರದ ಅವಧಿಯಲ್ಲಿ ಸಂಘದ ಅಭಿವೃದ್ಧಿಗೆ ಉತ್ತಮ ಕಾರ್ಯಗಳು ನಡೆಯಲಿ ಎಂದು ಶುಭ ಹಾರೈಸಿದ್ದಾರೆ.

### "ಲಕ್ಷಾಂತರ ಖರ್ಚು ಮಾಡಿ ಬೆಳೆದ ಫಸಲು ಕ್ಷಣಾರ್ಧದಲ್ಲಿ ಹಾಳು" ರೈತರ ಆಕ್ರಂದನ

## ಗಾಳಿ-ಮಳೆಗೆ ನೆಲಕಚ್ಚಿದ ಮಾವಿನ ಬೆಳೆ..!



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣ ಸೇರಿದಂತೆ ತಾಲೂಕಿನ ವಿವಿಧ ಭಾಗಗಳಲ್ಲಿ ಇತ್ತೀಚೆಗೆ ಸುರಿದ ಗಾಳಿ-ಮಳೆಗೆ ತೋಟಗಾರಿಕೆ ಬೆಳೆಗಳು ಭಾರೀ ಹಾನಿಗೀಡಾಗಿದ್ದು, ಮಾವು, ಬಾಳೆ ಸೇರಿದಂತೆ ಹಲವು ಬೆಳೆಗಳ ನಷ್ಟವನ್ನು ಹಿರಿಯ ತೋಟಗಾರಿಕಾ ಇಲಾಖೆ ನಿರ್ದೇಶಕ ಪ್ರಶಾಂತ ಕುಲಕರ್ಣಿ ಅವರು ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲಿಸಿದರು.

ಲಕ್ಷ್ಮೇಶ್ವರದ ಮಾವು ಬೆಳೆಗಾರ ನಿಂಗಪ್ಪ ಪೂಜಾರ ಹಾಗೂ ಸಹೋದರರ ಮಾವಿನ ತೋಟಕ್ಕೆ ಭೇಟಿ ನೀಡಿದ ವೇಳೆ, ಫಲಭರಿತ ಗಿಡಗಳಲ್ಲಿದ್ದ ಮಾವಿನ ಹಣ್ಣುಗಳು ಗಾಳಿಯ ಅಬ್ಬರಕ್ಕೆ ನೆಲಕ್ಕುರುಳಿದ ದೃಶ್ಯ ಕಂಡು ಅಧಿಕಾರಿಗಳು ಪರಿಶೀಲನೆ ನಡೆಸಿದರು. ಕಂದಾಯ ಇಲಾಖೆಯ ಸಿಬ್ಬಂದಿಯೂ ಸ್ಥಳದಲ್ಲೇ ಹಾನಿಯ ಪ್ರಮಾಣದ ಮಾಹಿತಿ ಸಂಗ್ರಹಿಸಿದರು.

> "ಬೆಳೆ ಹಾನಿಗೆ ತಕ್ಷಣ ಪರಿಹಾರ ನೀಡುವ ಮೂಲಕ ರೈತರ ಬದುಕಿಗೆ ಸರ್ಕಾರ ಆಸರೆಯಾಗಬೇಕು"
> – **ನಿಂಗಪ್ಪ ಪೂಜಾರ ಹಾಗೂ ಸಹೋದರರು ನೀಲಪ್ಪ, ನಾಗಪ್ಪ, ಶಿವಪ್ಪ, ದೇವಪ್ಪ**

ಈ ವೇಳೆ ತಮ್ಮ ಅಳಲನ್ನು ತೋಡಿಕೊಂಡ ರೈತ ನಿಂಗಪ್ಪ ಪೂಜಾರ, "ಈ ವರ್ಷದ ತೀವ್ರ ಬಿಸಿಲಿನ ನಡುವೆಯೂ ಅತ್ಯಂತ ಕಾಳಜಿಯಿಂದ ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಮಾವಿನ ತೋಟ ಬೆಳೆಸಿದ್ದೇವೆ. ಆದರೆ ಗಾಳಿ-ಮಳೆಗೆ ಗಿಡದಲ್ಲಿದ್ದ ಫಸಲೆಲ್ಲ ನೆಲಕ್ಕುರುಳಿದೆ. ಮೊದಲೇ ಉತ್ತಮ ಗುಣಮಟ್ಟದ ಹಣ್ಣಿನ ದರ ಕುಸಿದಿದ್ದು, ಈಗ ನೆಲಕ್ಕೆ ಬಿದ್ದ ಹಣ್ಣನ್ನು ಕೇಳುವವರೇ ಇಲ್ಲ. ಬದುಕಿಗೆ ಆಸರೆಯಾಗಿದ್ದ ಬೆಳೆಯೇ ಹಾಳಾಗಿದ್ದು ದಿಕ್ಕು ತೋಚದಂತಾಗಿದೆ" ಎಂದು ಕಣ್ಣೀರಿಟ್ಟರು.

ಪರಿಶೀಲನೆ ಬಳಿಕ ಮಾತನಾಡಿದ ಹಿರಿಯ ತೋಟಗಾರಿಕಾ ಇಲಾಖೆ ನಿರ್ದೇಶಕ ಪ್ರಶಾಂತ ಕುಲಕರ್ಣಿ, "ಲಕ್ಷ್ಮೇಶ್ವರ ಸೇರಿದಂತೆ ತಾಲೂಕಿನ ಕೆಲ ಗ್ರಾಮೀಣ ಭಾಗಗಳಲ್ಲಿ ತೋಟಗಾರಿಕೆ ಬೆಳೆಗಳು ಗಾಳಿ-ಮಳೆಯಿಂದ ಹಾನಿಗೀಡಾಗಿರುವ ಮಾಹಿತಿ ಹಿನ್ನೆಲೆ ಸ್ಥಳ ಪರಿಶೀಲನೆ ನಡೆಸಲಾಗಿದೆ. ಕಂದಾಯ ಹಾಗೂ ತೋಟಗಾರಿಕಾ ಇಲಾಖೆಯಿಂದ ಹಾನಿಯ ಪ್ರಮಾಣ ಆಧರಿಸಿ ಸರ್ಕಾರಕ್ಕೆ ವರದಿ ಸಲ್ಲಿಸಿ ಪರಿಹಾರ ಒದಗಿಸುವ ಪ್ರಕ್ರಿಯೆ ಕೈಗೊಳ್ಳಲಾಗುತ್ತದೆ" ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಹಾಯಕ ತೋಟಗಾರಿಕಾ ಅಧಿಕಾರಿ ಶಂಭುಲಿಂಗಪ್ಪ ನೆಗಳೂರು, ಕಂದಾಯ ಇಲಾಖೆಯ ಸಿಬ್ಬಂದಿ ಶ್ರೀಕಾಂತ ನವಲೆ ಉಪಸ್ಥಿತರಿದ್ದರು.

## ಮಳೆ-ಬಿರುಗಾಳಿ ಹಾನಿ ಪ್ರದೇಶಕ್ಕೆ ಜೆಡಿಎಸ್ ನಿಯೋಗ ಭೇಟಿ; ನೆರವಿನ ಭರವಸೆ



■ ವಿಜಯಸಾಕ್ಷಿ ಸುದ್ದಿ, ಗದಗ

ಭಾರೀ ಮಳೆ ಹಾಗೂ ಬಿರುಗಾಳಿಯಿಂದ ಹಾನಿಗೊಳಗಾದ ಗಂಗಿಮಡಿ ಪ್ರದೇಶಕ್ಕೆ ಜೆಡಿಎಸ್ ಪಕ್ಷದ ರಾಜ್ಯ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ ನೇತೃತ್ವದ ನಿಯೋಗ ಗುರುವಾರ ಭೇಟಿ ನೀಡಿ ಸಂತ್ರಸ್ತರ ಸಮಸ್ಯೆಗಳನ್ನು ಆಲಿಸಿತು.

ನಿಯೋಗದ ಸದಸ್ಯರು ಗಂಗಿಮಡಿ ಪ್ರದೇಶದಲ್ಲಿ ಮನೆ ಮನೆಗೆ ತೆರಳಿ ಹಾನಿಯನ್ನು ಪರಿಶೀಲಿಸಿದರು. ಈ ವೇಳೆ ತಮ್ಮ ಮನೆಗಳು ಹಾಗೂ ಬದುಕಿನ ಪರಿಸ್ಥಿತಿಯನ್ನು ವಿವರಿಸಿದ ನಿವಾಸಿಗಳು, ಜೆಡಿಎಸ್ ನಿಯೋಗದ ಸದಸ್ಯರ ಮುಂದೆ ಕಣ್ಣೀರಿಟ್ಟು ಅಳಲನ್ನು ತೋಡಿಕೊಂಡರು.

ಸಂತ್ರಸ್ತರ ಸಮಸ್ಯೆಗಳನ್ನು ಆಲಿಸಿದ ಜೆಡಿಎಸ್ ಮುಖಂಡರು, ಪಕ್ಷದ ವತಿಯಿಂದ ಅಗತ್ಯ ನೆರವು ನೀಡುವುದಾಗಿ ಭರವಸೆ ನೀಡಿದರು.


ಈ ಸಂದರ್ಭದಲ್ಲಿ ಮಾತನಾಡಿದ ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ, ಮಳೆ ಮತ್ತು ಬಿರುಗಾಳಿಯಿಂದ ಸಂಕಷ್ಟಕ್ಕೆ ಸಿಲುಕಿರುವ ಕುಟುಂಬಗಳಿಗೆ ಜೆಡಿಎಸ್ ಪಕ್ಷದ ವತಿಯಿಂದ ಸಾಧ್ಯವಾದ ನೆರವು ನೀಡಲಾಗುವುದು. ಸರ್ಕಾರ ಕೂಡಲೇ ಸಮರ್ಪಕ ಪರಿಹಾರ ಕಲ್ಪಿಸಬೇಕು. ಎಂದರು.

ನಿಯೋಗದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ವೀರನಗೌಡ ನಾಡಗೌಡ್ರ, ಬಸವರಾಜ ಅಪ್ಪಣ್ಣವರ, ಪ್ರಭುರಾಜಗೌಡ ಪಾಟೀಲ, ಪ್ರಫುಲ್ ಪುಣೇಕರ್, ವಿರೂಪಾಕ್ಷಯ್ಯ ಹಿರೇಮಠ, ಶ್ರೀಕಾಂತಗೌಡ ಪಾಟೀಲ, ಆಕಾಶ್ ಸರವಳಿ, ಹುಸೇನಸಾಬ ಬಿರೇಕ್ದಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಎಚ್.ಡಿ. ಕುಮಾರಸ್ವಾಮಿ ನಿರ್ಧಾರಕ್ಕೆ ಸರ್ದಾರ್ ಯಮನೂರಪ್ಪ ಹರ್ಷ; ಪಕ್ಷ ಸಂಘಟನೆಗೆ ಹೊಸ ಚೈತನ್ಯ ಎಂದ ಶಾಸಕ ಕೆ. ನೇಮಿರಾಜ ನಾಯ್ಕ

## ಜೆಡಿಎಸ್ ಹಿಂದುಳಿದ ವರ್ಗದ ರಾಜ್ಯಾಧ್ಯಕ್ಷರಾಗಿ ಶಿವಕುಮಾರ್ ನಾಟೀಕಾರ್ ನೇಮಕ

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ



ಜೆಡಿಎಸ್ ಪಕ್ಷದ ಹಿಂದುಳಿದ ವರ್ಗದ ರಾಜ್ಯಾಧ್ಯಕ್ಷರಾಗಿ ಶಿವಕುಮಾರ್ ನಾಟೀಕಾರ್ ಅವರನ್ನು ನೇಮಕ ಮಾಡಿರುವುದಕ್ಕೆ ವಿಜಯನಗರ ಜಿಲ್ಲಾ ಗಂಗಾಮತ ಬೆಸ್ತ ಸಮಾಜದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸರ್ದಾರ್ ಯಮನೂರಪ್ಪ ಅವರು ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿದ್ದಾರೆ.

ಶಿವಕುಮಾರ್ ನಾಟೀಕಾರ್ ಅವರು ಕಳೆದ 15 ರಿಂದ 20 ವರ್ಷಗಳಿಂದ ನಿರಂತರ ಸಾರ್ವಜನಿಕ ಸೇವೆಯಲ್ಲಿ ತೊಡಗಿಸಿಕೊಂಡಿದ್ದು, ಅವರ ರಾಜಕೀಯ ಹಾಗೂ ಸಾಮಾಜಿಕ ಸೇವೆಯನ್ನು ಗುರುತಿಸಿ ಈ ಹಿಂದೆ ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿತ್ತು. ಕಳೆದ ವಿಧಾನಸಭೆ ಚುನಾವಣೆಯಲ್ಲಿ ಅಫಜಲಪುರ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಯಾಗಿಯೂ ಸ್ಪರ್ಧಿಸಿದ್ದರು.

ಈಗ ಮತ್ತೆ ಜೆಡಿಎಸ್ ಹಿಂದುಳಿದ ವರ್ಗದ ರಾಜ್ಯಾಧ್ಯಕ್ಷರಾಗಿ ನೇಮಕ ಮಾಡುವ ಮೂಲಕ ರಾಜ್ಯಾದ್ಯಂತ ತಳಮಟ್ಟದಲ್ಲಿ ಪಕ್ಷವನ್ನು ಸಂಘಟಿಸುವ ಮಹತ್ವದ ಜವಾಬ್ದಾರಿಯನ್ನು ಕೇಂದ್ರ ಸಚಿವರು ಹಾಗೂ ಜೆಡಿಎಸ್ ರಾಜ್ಯ ನಾಯಕ ಎಚ್.ಡಿ. ಕುಮಾರಸ್ವಾಮಿ ನೀಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

> "ಕೇಂದ್ರ ಸಚಿವರು ಹಾಗೂ ಜೆಡಿಎಸ್ ರಾಜ್ಯ ನಾಯಕರು ಆದ ಎಚ್.ಡಿ. ಕುಮಾರಸ್ವಾಮಿ ಅಣ್ಣನವರ ಮಾರ್ಗದರ್ಶನದಲ್ಲಿ ಶಿವಕುಮಾರ್ ನಾಟೀಕಾರ್ ಅವರನ್ನು ಹಿಂದುಳಿದ ವರ್ಗದ ರಾಜ್ಯಾಧ್ಯಕ್ಷರಾಗಿ ನೇಮಕ ಮಾಡಿರುವುದು ಪಕ್ಷದ ಸಂಘಟನೆಗೆ ಹೊಸ ಬಲ ನೀಡಿದೆ. ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು."
> – **ಕೆ. ನೇಮಿರಾಜ ನಾಯ್ಕ,**
> ಜೆಡಿಎಸ್ ಶಾಸಕ, ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರ

ಭೀಮಾನದಿ ಉಳಿವಿಗಾಗಿ ಈ ಹಿಂದೆ ಭೀಮಾನದಿ ಸಂಪೂರ್ಣ ಬತ್ತಿ ಕುಡಿಯುವ ನೀರಿಗೂ ಹಾಹಾಕಾರ ಉಂಟಾದ ಸಂದರ್ಭದಲ್ಲಿ ಶಿವಕುಮಾರ್ ನಾಟೀಕಾರ್ ಅವರು ಕೈಗೊಂಡ ಅಮರಣಾಂತ ಉಪವಾಸ ಸತ್ಯಾಗ್ರಹ ರಾಜ್ಯದ ಗಮನ ಸೆಳೆದಿತ್ತು.

ಅದೇ ರೀತಿ ಪ್ರಸಿದ್ಧ ಯಾತ್ರಾ ಸ್ಥಳವಾದ ದೇವಲಗಾಣಪುರದ ದತ್ತಾತ್ರೇಯ ದೇವಸ್ಥಾನದ ಅಭಿವೃದ್ಧಿಗಾಗಿ ನಡೆಸಿದ ಹೋರಾಟಗಳು ಸಹ ಜನರ ಮೆಚ್ಚುಗೆ ಪಡೆದಿದ್ದವು ಎಂದು ಮುಖಂಡರು ಸ್ಮರಿಸಿದರು.

ರಾಜಕೀಯ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಅಪಾರ ಅನುಭವ ಹೊಂದಿರುವ ಶಿವಕುಮಾರ್ ನಾಟೀಕಾರ್ ಅವರ ನಾಯಕತ್ವದಲ್ಲಿ ಪಕ್ಷದ ಸಂಘಟನೆ ಮತ್ತಷ್ಟು ಬಲಿಷ್ಠವಾಗಲಿದೆ ಎಂದು

### ಉದ್ಯೋಗ ಖಾತ್ರಿ ಕಾಮಗಾರಿಯಲ್ಲೇ ಬದುಕಿನ ಆಸರೆ ಕಂಡ ಹನಮವ್ವ

# 80ರ ಹರೆಯದಲ್ಲೂ ಕೈಬಿಡದ ದುಡಿಮೆ!

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ



ವಯಸ್ಸು 80 ದಾಟಿದರೂ ದುಡಿದು ತಿನ್ನಬೇಕು ಎನ್ನುವ ಛಲ ಮಾತ್ರ ಕುಂದಿಲ್ಲ. ದೇಹದಲ್ಲಿ ಶಕ್ತಿ ಇರುವವರೆಗೆ ಕೆಲಸ ಮಾಡಲೇಬೇಕು ಎನ್ನುವ ಹಠದಿಂದ ವೀರಾಪುರ ಗ್ರಾಮದ ಹನಮವ್ವ ಹನಮಪ್ಪ ಮೊಹಿತೆ ಕಳೆದ 20 ವರ್ಷಗಳಿಂದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೂಲಿ ಕೆಲಸ ಮಾಡುತ್ತಿದ್ದಾರೆ.

ಗಜೇಂದ್ರಗಡ ತಾಲೂಕಿನ ರಾಂಪೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವೀರಾಪುರ ಗ್ರಾಮದ ನಿವಾಸಿಯಾದ ಹನಮವ್ವ ಅವರಿಗೆ ಪತಿ ಇಲ್ಲ. ಇಬ್ಬರು ಗಂಡು ಮಕ್ಕಳು ಇದ್ದರೂ ಕುಟುಂಬದ ಸಂಕಷ್ಟ ಮಾತ್ರ ಕಡಿಮೆಯಾಗಿಲ್ಲ. ಒಬ್ಬ ಮಗ ಬೇರೆ ಮನೆ ಮಾಡಿಕೊಂಡಿದ್ದರೆ, ಮತ್ತೊಬ್ಬ ಮಗ ಎಂಟು ವರ್ಷಗಳ ಹಿಂದೆ ಕೆಲಸಕ್ಕೆ ಹೋದವನು ಮರಳಿ ಮನೆಗೆ ಬಂದಿಲ್ಲ. ಇದೀಗ ಸೊಸೆಯೊಂದಿಗೆ ಜೀವನ ಸಾಗಿಸುತ್ತಿರುವ ಹನಮವ್ವ, ತಮ್ಮ ಎರಡು ಎಕರೆ ಒಣಭೂಮಿಯಿಂದ ಜೀವನ ಸಾಗುವುದು ಕಷ್ಟವೆಂದು ಅರಿತು ನರೇಗಾ ಯೋಜನೆಯ ಮೊರೆ ಹೋಗಿದ್ದಾರೆ. ಬೇಸಿಗೆ ಸಮಯದಲ್ಲಿ ಗ್ರಾಮದಲ್ಲಿ ಕೆಲಸ ಸಿಗದ ಸಂದರ್ಭಗಳಲ್ಲಿ ನರೇಗಾ ಯೋಜನೆಯೇ ಇವರ ಕುಟುಂಬಕ್ಕೆ ಆಧಾರವಾಗಿದೆ. ಸೊಸೆಯೊಂದಿಗೆ ಕಾಮಗಾರಿಗೆ ತೆರಳಿ ಇಂದಿಗೂ ಉತ್ಸಾಹದಿಂದ ದುಡಿಯುತ್ತಿರುವ ಹನಮವ್ವ ಗ್ರಾಮದಲ್ಲೇ ಇತರರಿಗೆ ಮಾದರಿಯಾಗಿದ್ದಾರೆ.

ಇನ್ನೊಬ್ಬ ಹಿರಿಯ ಮಹಿಳೆ ಹನಮವ್ವ ಯಲ್ಲಪ್ಪ ಮೊಹಿತೆ ಅವರಿಗೂ 78 ವರ್ಷ ವಯಸ್ಸು. ಆದರೂ ಉದ್ಯೋಗ ಖಾತ್ರಿ ಕೆಲಸ ಆರಂಭವಾದರೆ ಸಾಕು, ನಮೂನೆ-6ರಲ್ಲಿ ಹೆಸರು ನೋಂದಾಯಿಸಿಕೊಂಡು ಕೆಲಸಕ್ಕೆ ಬರುತ್ತಾರೆ. "ಮನೆಯಲ್ಲಿ ಖಾಲಿ ಕುಳಿತುಕೊಳ್ಳುವುದಕ್ಕಿಂತ ಮಕ್ಕಳಿಗೆ ಸಹಾಯ ಮಾಡಬೇಕು" ಎನ್ನುವ ಮನೋಭಾವದಿಂದ ಅವರು ಮಕ್ಕಳ ಹಾಗೂ ಸೊಸೆಯಂದಿರೊಂದಿಗೆ ನರೇಗಾ ಕಾಮಗಾರಿಯಲ್ಲಿ ದುಡಿಯುತ್ತಿದ್ದಾರೆ.

ಗ್ರಾಮೀಣ ಭಾಗದ ವಯೋವೃದ್ಧರು ಮತ್ತು ವಿಶೇಷಚೇತನರಿಗೆ ಕೆಲಸದ ಪ್ರಮಾಣದಲ್ಲಿ ಶೇ.50ರಷ್ಟು ರಿಯಾಯಿತಿ ನೀಡುತ್ತಿರುವುದರಿಂದ ಸಾಕಷ್ಟು ಬಡ ಕೂಲಿಕಾರರಿಗೆ ಯೋಜನೆ ನೆರವಾಗುತ್ತಿದೆ.

> "ನರೇಗಾ ಜಾಬ್ ಕಾರ್ಡ್ ಹೊಂದಿರುವ ಪ್ರತಿಯೊಬ್ಬರೂ ಕೆಲಸ ಮಾಡಬಹುದು. ಇದರಲ್ಲಿ ಯಾವುದೇ ವಯಸ್ಸಿನ ಮಿತಿ ಇಲ್ಲ. ವಯೋವೃದ್ಧರು ಹಾಗೂ ವಿಕಲಚೇತನರಿಗೆ ಕೆಲಸದ ಪ್ರಮಾಣದಲ್ಲಿ ರಿಯಾಯಿತಿ ನೀಡಲಾಗುತ್ತಿದೆ."
> –**ವಿಶ್ವನಾಥ ರಾಠೋಡ**, ಸಹಾಯಕ ನಿರ್ದೇಶಕರು (ಗ್ರಾ.ಉ), ತಾ.ಪಂ. ಗಜೇಂದ್ರಗಡ

> "ಬೇಸಿಗೆಯಲ್ಲಿ ಹಳ್ಳಿಯಲ್ಲಿ ಕೆಲಸ ಇರಲ್ಲರೀ ಉದ್ಯೋಗ ಖಾತ್ರಿ ಕೆಲಸ ಶುರುವಾದರೆ ನಾವು ಕೂಡ ಕೆಲಸಕ್ಕೆ ಬರುತ್ತೀವಿ. ದೇಹದಲ್ಲಿ ಇನ್ನೂ ದುಡಿಯುವ ಶಕ್ತಿ ಇದೆ. ಮನೆಯಲ್ಲಿ ಖಾಲಿ ಕುಳಿತುಕೊಳ್ಳುವುದಕ್ಕಿಂತ ನಾಲ್ಕು ರೂಪಾಯಿ ದುಡಿದರೆ ಬದುಕಿಗೆ ಸಹಾಯವಾಗುತ್ತದೆ."
> –**ಹನಮವ್ವ ಮೊಹಿತೆ, ಕೂಲಿಕಾರರು, ವೀರಾಪುರ**

> "ಬೇಸಿಗೆಯಲ್ಲಿ ಗ್ರಾಮೀಣ ಭಾಗದ ಜನರು ಗುಳೆ ಹೋಗುವುದನ್ನು ತಪ್ಪಿಸಲು ಊರಲ್ಲೇ ಕೆಲಸ ನೀಡಲಾಗುತ್ತಿದೆ. ನರೇಗಾ ಯೋಜನೆ ಗ್ರಾಮೀಣ ಕುಟುಂಬಗಳಿಗೆ ಆರ್ಥಿಕ ಬಲ ನೀಡುತ್ತಿದೆ."
> –**ಚಂದ್ರಶೇಖರ ಬಿ. ಕಂದಕೂರ**, ಇಒ, ತಾ.ಪಂ. ಗಜೇಂದ್ರಗಡ

### "ಶೈಕ್ಷಣಿಕ ಜಾಗ ಉಳಿಸಿ" : ಕಾಮಗಾರಿ ಸ್ಥಳಾಂತರಕ್ಕೆ ಹಳೇ ವಿದ್ಯಾರ್ಥಿಗಳ ಗುಡುಗು

# ಕಾಮಗಾರಿ ನಿಲ್ಲಿಸಿ, ಜಲಾಗಾರ ಸ್ಥಳಾಂತರಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ




ಪಟ್ಟಣದ ಪುರಸಭೆ ಕಲಾ ಮಹಾವಿದ್ಯಾಲಯದ ಕ್ಯಾಂಪಸ್‌ನಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ನಿರ್ಮಿಸಲಾಗುತ್ತಿರುವ ಬೃಹತ್ ಜಲಾಗಾರ ಕಾಮಗಾರಿಗೆ ಹಳೇ ವಿದ್ಯಾರ್ಥಿಗಳು, ಶಿಕ್ಷಣ ಪ್ರೇಮಿಗಳು ಹಾಗೂ ಸಾರ್ವಜನಿಕರಿಂದ ತೀವ್ರ ವಿರೋಧ ವ್ಯಕ್ತವಾಗಿದೆ.

ಕಾಮಗಾರಿಯನ್ನು ಕೂಡಲೇ ಸ್ಥಗಿತಗೊಳಿಸಿ ಬೇರೆಡೆಗೆ ಸ್ಥಳಾಂತರಿಸಬೇಕು ಎಂದು ಆಗ್ರಹಿಸಿ ಕಾಲೇಜಿನ ಹಳೇ ವಿದ್ಯಾರ್ಥಿಗಳು ಮತ್ತು ಮುಖಂಡರು ಪತ್ರಿಕಾಗೋಷ್ಠಿಯಲ್ಲಿ ಕಿಡಿಕಾರಿದರು.

ಪುರಸಭೆ ಮಾಜಿ ಸದಸ್ಯ ಮಹೇಶ ಹೊಗೆಸೊಪ್ಪಿನ, ವಕೀಲ ಬಸವರಾಜ ಬಾಳೇಶ್ವರಮಠ ಹಾಗೂ ಪುರಸಭೆ ಮಾಜಿ ಅಧ್ಯಕ್ಷ ಎಂ.ಆರ್. ಪಾಟೀಲ ಮಾತನಾಡಿ, "ಕುಡಿಯುವ ನೀರಿನ ಯೋಜನೆಗೆ ನಮ್ಮ ವಿರೋಧವಿಲ್ಲ. ಆದರೆ ಕಾಲೇಜಿನ ಕ್ಯಾಂಪಸ್‌ನಲ್ಲೇ ಬೃಹತ್ ಜಲಾಗಾರ ನಿರ್ಮಾಣ ಮಾಡಿದರೆ ಭವಿಷ್ಯದಲ್ಲಿ ಶೈಕ್ಷಣಿಕ ಚಟುವಟಿಕೆ, ಕ್ರೀಡೆ ಹಾಗೂ ಪಠ್ಯೇತರ ಚಟುವಟಿಕೆಗಳಿಗೆ ಜಾಗವೇ ಇಲ್ಲದಂತಾಗುತ್ತದೆ" ಎಂದು ಆತಂಕ ವ್ಯಕ್ತಪಡಿಸಿದರು.

"ಈ ಪದವಿ ಕಾಲೇಜಿನ ಭೂಮಿಯನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ದಾನ ಮಾಡಲಾಗಿದೆ. ಇಂತಹ ಜಾಗದಲ್ಲಿ ಜಲಾಗಾರ ನಿರ್ಮಾಣ ಮಾಡುತ್ತಿರುವುದು ಹಳೇ ವಿದ್ಯಾರ್ಥಿಗಳು ಹಾಗೂ ಶಿಕ್ಷಣ ಪ್ರೇಮಿಗಳ ಭಾವನೆಗೆ ಧಕ್ಕೆ ತಂದಿದೆ" ಎಂದು ಆರೋಪಿಸಿದರು.

ಟಿಎಪಿಸಿಎಂಎಸ್ ಅಧ್ಯಕ್ಷ ಸೋಮೇಶ ಉಪನಾಳ ಹಾಗೂ ಕರವೇ ಸ್ವಾಭಿಮಾನಿ ಸೇನೆ ಜಿಲ್ಲಾಧ್ಯಕ್ಷ ಶರಣು ಗೋಡಿ ಮಾತನಾಡಿ, ಪಟ್ಟಣದಲ್ಲಿ ಈಗಾಗಲೇ ಹಲವು ಜಲಾಗಾರಗಳು ನಿರುಪಯುಕ್ತವಾಗಿವೆ. ಪುರಸಭೆ ವ್ಯಾಪ್ತಿಯಲ್ಲಿ ಸಾಕಷ್ಟು ಖಾಲಿ ನಿವೇಶನಗಳಿದ್ದರೂ ಕಾಲೇಜು ಆವರಣವನ್ನೇ ಆಯ್ಕೆ ಮಾಡಿರುವುದು ಅನುಮಾನಕ್ಕೆ ಕಾರಣವಾಗಿದೆ ಎಂದು ಆಕ್ಷೇಪಿಸಿದರು.

ತಿಪ್ಪಣ್ಣ ಸಂಶಿ ಹಾಗೂ ಡಿ.ಬಿ. ಫಕ್ಕೀರಪ್ಪ ಮಾತನಾಡಿ, "ಪುರಸಭೆ ನಡೆಸುತ್ತಿರುವ ಶಾಲೆ-ಕಾಲೇಜಿಗೆ ಈಗಾಗಲೇ ಮೈದಾನ ಹಾಗೂ ಹೊಸ ಕಟ್ಟಡ ನಿರ್ಮಾಣಕ್ಕೆ ಜಾಗದ ಕೊರತೆ ಇದೆ. ಇಂತಹ ಸಂದರ್ಭದಲ್ಲಿ ಯಾವುದೇ ಪೂರ್ವಾಪರ ಚಿಂತನೆ ಇಲ್ಲದೆ ಜಲಾಗಾರ ನಿರ್ಮಾಣಕ್ಕೆ ಅನುಮತಿ ನೀಡಿರುವುದು ಸರಿಯಲ್ಲ" ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ರಾಮಣ್ಣ ಲಮಾಣಿ (ಶಿಗ್ಲಿ), ಪ್ರಕಾಶ ಕೊಂಚಿಗೇರಿಮಠ, ಮುತ್ತಣ್ಣ ಗಡೆಪ್ಪನವರ, ಮಾಂತೇಶ ಉಮಚಗಿ, ಖಾನಸಾಬ ಸೂರಣಗಿ, ನೀಲಪ್ಪ ಪಡಗೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> "ಕಾಲೇಜು ಕ್ಯಾಂಪಸ್‌ನಲ್ಲಿ ಜಲಾಗಾರ ನಿರ್ಮಾಣಕ್ಕೆ ಆರಂಭದಿಂದಲೇ ವಿರೋಧವಿದೆ. ಗುತ್ತಿಗೆದಾರರು ರಾಜಕೀಯ ಪ್ರಭಾವದಿಂದ ಕಾಮಗಾರಿ ಮುಂದುವರಿಸುತ್ತಿದ್ದಾರೆ. ಸ್ಥಳಾಂತರಿಸದಿದ್ದರೆ ಹಳೇ ವಿದ್ಯಾರ್ಥಿಗಳೆಲ್ಲರೂ ಸೇರಿ ಅನಿರ್ದಿಷ್ಟಾವಧಿ ಹೋರಾಟ ನಡೆಸುತ್ತೇವೆ."
> – **ಶರಣು ಗೋಡಿ**, ಜಿಲ್ಲಾಧ್ಯಕ್ಷ, ಕರವೇ ಸ್ವಾಭಿಮಾನಿ ಸೇನೆ

### 104ಕ್ಕೂ ಅಧಿಕ ಶಾಸನಗಳ ಮೂಲಕ ಬೆಳಕಿಗೆ ಬಂದ ಪುಲಿಗೆರೆಯ ವೈಭವ ರಾಜ್ಯಮಟ್ಟದ ವಿಚಾರ ಸಂಕಿರಣದಲ್ಲಿ ಇತಿಹಾಸದ ಅನಾವರಣ

# ಪ್ರಾಚೀನ ಪರಂಪರೆಯ ಸಂರಕ್ಷಣೆಗೆ ಯುವಪೀಳಿಗೆ ಮುಂದಾಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



"ಪುಲಿಗೆರೆ ಶಾಸನಗಳು ಕನ್ನಡ ನಾಡಿನ ಸಾಂಸ್ಕೃತಿಕ, ಸಾಹಿತ್ಯಿಕ ಹಾಗೂ ರಾಜಕೀಯ ಇತಿಹಾಸದ ಜೀವಂತ ಸಾಕ್ಷ್ಯಗಳಾಗಿವೆ. ಇವುಗಳ ಕುರಿತು ಇನ್ನಷ್ಟು ಆಳವಾದ ಅಧ್ಯಯನ ನಡೆಯಬೇಕಿದ್ದು, ಸಂರಕ್ಷಣೆಗೆ ಸಮಾಜ ಒಟ್ಟಾಗಿ ಮುಂದಾಗಬೇಕು" ಎಂದು ವಿಶ್ರಾಂತ ಕೆಎಎಸ್ ಅಧಿಕಾರಿ ಹಾಗೂ ಸಾಹಿತಿ ಡಾ. ಹನುಮಾಕ್ಷಿ ಗೋಗಿ ಅಭಿಪ್ರಾಯಪಟ್ಟರು.

ಪಟ್ಟಣದ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಸಮುದಾಯ ಭವನದಲ್ಲಿ ನಡೆದ 'ಪುಲಿಗೆರೆ ಪರಿಸರದ ಪ್ರಾಚೀನ ಕನ್ನಡ ಸಾಹಿತ್ಯ' ರಾಜ್ಯಮಟ್ಟದ ವಿಚಾರ ಸಂಕಿರಣದಲ್ಲಿ "ಪುಲಿಗೆರೆಯ ಶಾಸನಗಳು" ವಿಷಯವಾಗಿ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಪ್ರಾಚೀನ ಕಾಲದಿಂದಲೂ ಪುಲಿಗೆರೆ ಒಂದು ಮಹತ್ವದ ಐತಿಹಾಸಿಕ ಹಾಗೂ ಸಾಂಸ್ಕೃತಿಕ ಕೇಂದ್ರವಾಗಿತ್ತು ಎಂಬುದು ಇಲ್ಲಿನ ಶಾಸನಗಳಿಂದ ಸ್ಪಷ್ಟವಾಗುತ್ತದೆ ಎಂದು ಅವರು ಹೇಳಿದರು.

ಅಂದಿನ ಪುಲಿಗೆರೆ, ಇಂದಿನ ಲಕ್ಷ್ಮೇಶ್ವರ, ಶೈವ, ವೈಷ್ಣವ ಹಾಗೂ ಜೈನ ಧರ್ಮಗಳ ಪ್ರಮುಖ ಕೇಂದ್ರವಾಗಿತ್ತು. ಇಲ್ಲಿ 101ಕ್ಕೂ ಹೆಚ್ಚು ಬಸದಿಗಳು ಇದ್ದವು ಎಂಬ ಉಲ್ಲೇಖ ಶಾಸನಗಳಲ್ಲಿ ದೊರೆಯುತ್ತದೆ ಎಂದು ವಿವರಿಸಿದರು.

ಮಹಾಮಂಡಲೇಶ್ವರರು ಹಾಗೂ ರಾಣಿಯರು ದೇವಾಲಯಗಳು ಮತ್ತು ಬಸದಿಗಳನ್ನು ನಿರ್ಮಿಸಿ ದಾನದತ್ತಿಗಳನ್ನು ನೀಡಿರುವ ಮಾಹಿತಿ ಶಾಸನಗಳಲ್ಲಿ ಉಲ್ಲೇಖವಾಗಿರುವುದನ್ನು ಅವರು ತಿಳಿಸಿದರು. ಲಕ್ಷ್ಮೇಶ್ವರ ಒಂದು ಮಹಾ ಅಗ್ರಹಾರ, ಘಟಿಕಾಸ್ಥಾನ ಹಾಗೂ ವಿದ್ಯಾಕೇಂದ್ರವಾಗಿತ್ತು. ಇಂತಹ ಮಹತ್ವದ ಇತಿಹಾಸವನ್ನು ಮುಂದಿನ ಪೀಳಿಗೆಗೆ ಉಳಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಕರೆ ನೀಡಿದರು.

ಯುವಪೀಳಿಗೆ ಇತಿಹಾಸ ಹಾಗೂ ಪುರಾತತ್ವ ಅಧ್ಯಯನಗಳತ್ತ ಹೆಚ್ಚಿನ ಆಸಕ್ತಿ ಬೆಳೆಸಿಕೊಳ್ಳಬೇಕು. ಐತಿಹಾಸಿಕ ಪರಂಪರೆಯ ಸಂರಕ್ಷಣೆ ಕೇವಲ ಸರ್ಕಾರದ ಕೆಲಸವಲ್ಲ, ಅದು ಸಮಾಜದ ಜವಾಬ್ದಾರಿಯೂ ಆಗಿದೆ ಎಂದು ಹೇಳಿದರು.

> "ಪುಲಿಗೆರೆಯಲ್ಲಿ 104ಕ್ಕೂ ಅಧಿಕ ಶಾಸನಗಳು ದೊರೆತಿದ್ದು, ಅಂದಿನ ಸಮಾಜ ಜೀವನ, ಆಡಳಿತ ವ್ಯವಸ್ಥೆ, ದಾನಧರ್ಮ, ದೇವಾಲಯ ನಿರ್ಮಾಣ ಹಾಗೂ ಭಾಷಾ ಬೆಳವಣಿಗೆಯ ಕುರಿತು ಅಮೂಲ್ಯ ಮಾಹಿತಿಯನ್ನು ನೀಡುತ್ತವೆ"
> – **ಡಾ. ಹನುಮಾಕ್ಷಿ ಗೋಗಿ**

### ಮಕ್ಕಳ ನಡೆ-ನುಡಿಗೆ ಪಾಲಕರೇ ಮೊದಲ ಗುರುಗಳು : ಶಿರೋಳ ಗವಿಮಠದ ಶ್ರೀಗಳ ಕಿವಿಮಾತು

# ಸಂಸ್ಕಾರವಿಲ್ಲದ ಶಿಕ್ಷಣ ಸಮಾಜಕ್ಕೆ ಅಪಾಯ

■ವಿಜಯಸಾಕ್ಷಿ ಸುದ್ದಿ, ಗದಗ




ಮಕ್ಕಳಿಗೆ ಲಕ್ಷಾಂತರ ರೂಪಾಯಿ ಖರ್ಚು ಮಾಡಿ ದೂರದ ಶಾಲೆಗಳಿಗೆ ಸೇರಿಸುವುದಕ್ಕಿಂತ, ಪ್ರತಿದಿನ ಸ್ವಲ್ಪ ಸಮಯ ಮೀಸಲಿಟ್ಟು ಅವರ ಬಗ್ಗೆ ವೈಯುಕ್ತಿಕ ಕಾಳಜಿ ವಹಿಸಿದರೆ ಉತ್ತಮ ಸಂಸ್ಕಾರ, ನಡೆ-ನುಡಿ ಹೊಂದಿದ ಆದರ್ಶ ವ್ಯಕ್ತಿಗಳಾಗಿ ಬೆಳೆದು ಸಮಾಜಕ್ಕೆ ಮಾದರಿಯಾಗುತ್ತಾರೆ ಎಂದು ಶಿರೋಳ ಗವಿಮಠದ ಅಭಿನವ ಯಚ್ಚರ ಮಹಾಸ್ವಾಮಿಗಳು ಹೇಳಿದರು.

ವರವಿಯಲ್ಲಿ ನಡೆದ 21ನೇ ರಾಜ್ಯಮಟ್ಟದ ವಿಶ್ವಬ್ರಾಹ್ಮಣ ವಿದ್ಯಾರ್ಥಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಮಕ್ಕಳ ಬೆಳವಣಿಗೆಯಲ್ಲಿ ಪಾಲಕರ ಪಾತ್ರದ ಮಹತ್ವವನ್ನು ಮನದಟ್ಟು ಮಾಡಿದರು.

"ಶ್ರೀಕ್ಷೇತ್ರದಲ್ಲಿ ವರ್ಷಗಳಿಂದ ನಡೆಯುತ್ತಿರುವ ಶಿಬಿರಗಳಲ್ಲಿ ಮೌಲಿಕ ಜೀವನ ಮೌಲ್ಯಗಳ ಬಗ್ಗೆ ನೀಡಲಾಗುತ್ತಿರುವ ಮಾರ್ಗದರ್ಶನದಿಂದ ಅನೇಕ ವಿದ್ಯಾರ್ಥಿಗಳು ಬದುಕಿನಲ್ಲಿ ಉತ್ತಮ ದಾರಿ ಕಂಡು ಕೊಂಡಿದ್ದಾರೆ. ಇದು ಶಿಬಿರದ ಯಶಸ್ಸಿಗೆ ಸಾಕ್ಷಿಯಾಗಿದೆ" ಎಂದು ಅವರು ಹೇಳಿದರು.

ಸಮಾರೋಪ ಸಮಾರಂಭದ ನೇತೃತ್ವ ವಹಿಸಿದ್ದ ಗಾಂಧಾರ ವಿದ್ಯೆ ಸಾಧಕ ಮಹರ್ಷಿ ಮೃತ್ಯುಂಜಯ ಅಕ್ಕಿ ಗುರೂಜಿ ಮಾತನಾಡಿ, "ಯೋಗ, ಧ್ಯಾನ ಹಾಗೂ ಆರೋಗ್ಯ ಕುರಿತ ಪ್ರಾಯೋಗಿಕ ತರಗತಿಗಳಲ್ಲಿ ಕಲಿತ ಅಂಶಗಳನ್ನು ವಿದ್ಯಾರ್ಥಿಗಳು ದಿನನಿತ್ಯ ಜೀವನದಲ್ಲಿ ಅಳವಡಿಸಿಕೊಂಡರೆ ಬದುಕು ಸುಂದರವಾಗುತ್ತದೆ" ಎಂದು ಸಲಹೆ ನೀಡಿದರು.

ನಂತರ ಪುತ್ರಿ ಆರಾಧ್ಯಳೊಂದಿಗೆ ಗಾಂಧಾರ ಕಲಾ ಪ್ರದರ್ಶನ ನೀಡುವ ಮೂಲಕ ಸಭಿಕರ ಮನ ಗೆದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಟ್ರಸ್ಟ್ ಅಧ್ಯಕ್ಷ ಮೋಹನ ನರಗುಂದ ಮಾತನಾಡಿ, "ನಾಡಿನ ಸಮಾಜಬಾಂಧವರು, ಗುರುಹಿರಿಯರು ಹಾಗೂ ಜನಪ್ರತಿನಿಧಿಗಳ ಸಹಕಾರದಿಂದ ವರವಿಯಲ್ಲಿ ವಿದ್ಯಾರ್ಥಿ ಶಿಬಿರ ಮತ್ತು 45 ವಟುಗಳ ಉಪನಯನ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿದೆ" ಎಂದು ಹೇಳಿದರು.

ಶಿಬಿರದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಸ್ಕೂಲ್ ಬ್ಯಾಗ್, ಟಿ-ಶರ್ಟ್, ಕ್ಯಾಪ್, ಪ್ರಮಾಣಪತ್ರ, ನೋಟ್‌ಬುಕ್, ಪೆನ್ನು, ಸಂಧ್ಯಾವಂದನೆ ಪುಸ್ತಕ ಸೇರಿದಂತೆ ಹಲವು ಅಗತ್ಯ ವಸ್ತುಗಳನ್ನು ವಿತರಿಸಲಾಯಿತು. ಉಪನಯನ ಕಾರ್ಯಕ್ರಮಕ್ಕೆ ಸಹಕರಿಸಿದ ಸೇವಾಭಕ್ತರನ್ನು ಇದೇ ವೇಳೆ ಸನ್ಮಾನಿಸಲಾಯಿತು.

ಹುಬ್ಬಳ್ಳಿ ನವನಗರದ ವಿಶ್ವಕರ್ಮ ವಿಕಾಸ ಟ್ರಸ್ಟ್ ಅಧ್ಯಕ್ಷ ಹಾಗೂ ವಿಶ್ವಕರ್ಮ ವಿಕಾಸ ಪತ್ರಿಕೆಯ ಪ್ರಧಾನ ಸಂಪಾದಕ ಸಿ.ಪಿ. ಮಾಯಾಚಾರಿ ಮಾತನಾಡಿ, "ಮಕ್ಕಳನ್ನು ಸುಸಂಸ್ಕೃತವಾಗಿ ಬೆಳೆಸಲು ಇಂತಹ ಶಿಬಿರಗಳು ಪ್ರಮುಖ ಪಾತ್ರವಹಿಸುತ್ತವೆ. ಶ್ರೀಮಂತ-ಬಡವ ಭೇದವಿಲ್ಲದೆ ಎಲ್ಲರೂ ಭಾಗವಹಿಸುವುದು ಇಲ್ಲಿನ ವಿಶೇಷತೆ" ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಬಿ.ಎಂ. ಯರಕದ, ಬಿ.ಎಲ್. ಪತ್ತಾರ, ರಾಘವೇಂದ್ರ ಇಚ್ಚಂಗಿ, ಬಸವರಾಜ ಬಡಿಗೇರ, ವೀರಣ್ಣ ಹಲವಾಗಲಿ, ಮಹೇಶ ಕಮ್ಮಾರ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಶಿಬಿರ ಕ್ಷೇಮಪಾಲಕ ಸತೀಶ ಹೊರಪೇಟಿ ಪ್ರಾರ್ಥಿಸಿದರು. ಎಸ್.ಎನ್. ಬಡಿಗೇರ ಸ್ವಾಗತಿಸಿದರು. ಶಿಬಿರ ನಿರ್ದೇಶಕ ವಿಶ್ವನಾಥ ಕಮ್ಮಾರ ಪ್ರಾಸ್ತಾವಿಕವಾಗಿ ಶಿಬಿರದ ಪಕ್ಷಿನೋಟ ನೀಡಿದರು. ಕಾರ್ಯದರ್ಶಿ ರವೀಂದ್ರ ಕಮ್ಮಾರ ವಂದಿಸಿದರು.

> "ಮಕ್ಕಳ ಉನ್ನತ ವ್ಯಾಸಂಗದ ಜೊತೆಗೆ ತಂದೆ-ತಾಯಿ ಹಾಗೂ ಹಿರಿಯರನ್ನು ಗೌರವಿಸುವ ಗುಣ ಬೆಳೆಸುವ ಜವಾಬ್ದಾರಿ ಪಾಲಕರ ಮೇಲಿದೆ. ಸಂಸ್ಕಾರ, ಸಂಸ್ಕೃತಿ, ಉತ್ತಮ ಆಚಾರ-ವಿಚಾರಗಳೇ ಬದುಕಿನ ನಿಜವಾದ ಆಸ್ತಿ"
> –**ಅಭಿನವ ಯಚ್ಚರ ಮಹಾಸ್ವಾಮಿಗಳು, ಶಿರೋಳ ಗವಿಮಠ**

#### "ಇಂತಹ ಶಿಬಿರಗಳು ಮಕ್ಕಳ ಭವಿಷ್ಯ ರೂಪಿಸುತ್ತವೆ"

ಧಾರವಾಡ ಜಿಲ್ಲಾ ವಿಶ್ವಕರ್ಮ ಮಹಾ ಒಕ್ಕೂಟದ ಅಧ್ಯಕ್ಷ ವಸಂತ ಅರ್ಕಾಚಾರಿ ಮಾತನಾಡಿ, "ಶಿಬಿರದಲ್ಲಿ ಉಪನ್ಯಾಸ ಹಾಗೂ ಪ್ರಾಯೋಗಿಕ ತರಗತಿಗಳ ಮೂಲಕ ವಿದ್ಯಾರ್ಥಿಗಳು ಅಮೂಲ್ಯ ಜ್ಞಾನ ಪಡೆದಿದ್ದಾರೆ. ಆಯೋಜಕರ ಪರಿಶ್ರಮ ಆದರ್ಶಪ್ರಾಯವಾಗಿದೆ" ಎಂದು ಅಭಿಪ್ರಾಯಪಟ್ಟರು.

### "ಜಿಲ್ಲೆಯಲ್ಲಿ ಬೀಜ-ಗೊಬ್ಬರ ಭರ್ತಿ ದಾಸ್ತಾನು; ಕಾಳಸಂತೆ ತಡೆಗೆ ಕೃಷಿ ಇಲಾಖೆಯ ಕಟ್ಟೆಚ್ಚರ

# ಮುಂಗಾರು ಹಂಗಾಮಿಗೆ ಜಿಲ್ಲೆ ಸಜ್ಜು

■ವಿಜಯಸಾಕ್ಷಿ ಸುದ್ದಿ, ಗದಗ




ಮುಂಗಾರು ಮಳೆ ಚುರುಕುಗೊಳ್ಳುತ್ತಿದ್ದಂತೆ ಜಿಲ್ಲೆಯ ರೈತರು ಬಿತ್ತನೆ ಸಿದ್ಧತೆಯಲ್ಲಿ ತೊಡಗಿದ್ದು, ಕೃಷಿ ಇಲಾಖೆಯೂ ಬೀಜ ಹಾಗೂ ರಸಗೊಬ್ಬರ ದಾಸ್ತಾನು ವ್ಯವಸ್ಥೆಯನ್ನು ಭರದಿಂದ ಕೈಗೊಂಡಿದೆ. ಜೂನ್ ಮೊದಲ ವಾರದಲ್ಲಿ ಮುಂಗಾರು ಆಗಮನದ ನಿರೀಕ್ಷೆಯ ನಡುವೆ ಜಿಲ್ಲೆಯಾದ್ಯಂತ ಕೃಷಿ ಚಟುವಟಿಕೆಗಳು ವೇಗ ಪಡೆದುಕೊಂಡಿವೆ.

ಮೇ 19ರವರೆಗೆ ವಾಡಿಕೆಯಂತೆ 74.5 ಮಿ.ಮೀ ಮಳೆಯಾಗಬೇಕಿದ್ದರೆ, ಈಗಾಗಲೇ 107.7 ಮಿ.ಮೀ ಮಳೆಯಾಗಿದೆ. ಇದರಿಂದ ರೈತರು ಹೊಲಗಳನ್ನು ಹಸನು ಮಾಡುವುದು, ಟ್ರ್ಯಾಕ್ಟರ್ ಹಾಗೂ ಎತ್ತುಗಳ ಮೂಲಕ ಜಮೀನು ಸ್ವಚ್ಛಗೊಳಿಸುವುದು, ಬಿತ್ತನೆಗೆ ಸಿದ್ಧಗೊಳಿಸುವ ಕಾರ್ಯದಲ್ಲಿ ನಿರತರಾಗಿದ್ದಾರೆ.

2026-27ನೇ ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ ಒಟ್ಟು 3.14 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ವಿವಿಧ ಬೆಳೆಗಳ ಬಿತ್ತನೆ ಗುರಿ ನಿಗದಿಯಾಗಿದೆ. ಪ್ರಮುಖವಾಗಿ ಹೆಸರು 1.17 ಲಕ್ಷ ಹೆಕ್ಟೇರ್, ಮೆಕ್ಕೆಜೋಳ 1.55 ಲಕ್ಷ ಹೆಕ್ಟೇರ್, ಶೇಂಗಾ 15 ಸಾವಿರ ಹೆಕ್ಟೇರ್ ಹಾಗೂ ಸೂರ್ಯಕಾಂತಿ 8 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ.

ಜಿಲ್ಲೆಗೆ ವಿವಿಧ ಬೆಳೆಗಳ ಸುಮಾರು 8 ಸಾವಿರ ಕ್ವಿಂಟಲ್ ಬಿತ್ತನೆ ಬೀಜಗಳ ಅವಶ್ಯಕತೆಯಿದ್ದು, ಪ್ರಮುಖ ಬೀಜಗಳನ್ನು ರೈತ ಸಂಪರ್ಕ ಕೇಂದ್ರಗಳಲ್ಲಿ ದಾಸ್ತಾನು ಮಾಡಲಾಗಿದೆ. ಶೀಘ್ರದಲ್ಲೇ ರಿಯಾಯಿತಿ ದರದಲ್ಲಿ ವಿತರಣೆ ಆರಂಭವಾಗಲಿದೆ ಎಂದು ಕೃಷಿ ಇಲಾಖೆ ತಿಳಿಸಿದೆ.

ಮುಂಗಾರು ಹಂಗಾಮಿನ ಬೇಡಿಕೆಗೆ ಅನುಗುಣವಾಗಿ ಯೂರಿಯಾ, ಡಿ.ಎ.ಪಿ., ಎಂ.ಒ.ಪಿ. ಹಾಗೂ ಸಂಯುಕ್ತ ರಸಗೊಬ್ಬರಗಳನ್ನು ಜಿಲ್ಲೆಯ ವಿವಿಧ ಮಳಿಗೆಗಳಲ್ಲಿ ದಾಸ್ತಾನು ಮಾಡಲಾಗಿದೆ. ಜಿಲ್ಲೆಯಲ್ಲಿ ಒಟ್ಟು 19,450 ಮೆಟ್ರಿಕ್ ಟನ್ ರಸಗೊಬ್ಬರಗಳ ಬೇಡಿಕೆ ಇದ್ದು, ಸದ್ಯ 16,194 ಮೆಟ್ರಿಕ್ ಟನ್ ಗೊಬ್ಬರ ಸಂಗ್ರಹಿಸಲಾಗಿದೆ.

ಬಿತ್ತನೆ ಅವಧಿಯಲ್ಲಿ ಗೊಬ್ಬರಗಳಿಗೆ ಹೆಚ್ಚಿನ ಬೇಡಿಕೆ ಇರುವುದರಿಂದ ಕೆಲವರು ಕೃತಕ ಕೊರತೆ ಸೃಷ್ಟಿಸಿ ಹೆಚ್ಚುವರಿ ದರಕ್ಕೆ ಮಾರಾಟ ಮಾಡುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಕೃಷಿ ಇಲಾಖೆ ಅಧಿಕಾರಿಗಳು ಗೊಬ್ಬರ ಅಂಗಡಿಗಳ ಮೇಲೆ ಕಟ್ಟುನಿಟ್ಟಿನ ನಿಗಾ ವಹಿಸಿದ್ದಾರೆ. ನಿಗದಿತ ದರಕ್ಕಿಂತ ಹೆಚ್ಚು ಹಣ ವಸೂಲಿ ಮಾಡಿದರೆ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದ್ದಾರೆ.

ರಾಸಾಯನಿಕ ಗೊಬ್ಬರಗಳ ಜೊತೆಗೆ ಗೋಮಯ, ಕಂಪೋಸ್ಟ್ ಹಾಗೂ ಜೈವಿಕ ಗೊಬ್ಬರಗಳ ಬಳಕೆಗೆ ಆದ್ಯತೆ ನೀಡುವಂತೆ ರೈತರಿಗೆ ಸಲಹೆ ನೀಡಲಾಗಿದೆ. ಮಣ್ಣಿನ ಪರೀಕ್ಷೆ ಆಧರಿಸಿ ಗೊಬ್ಬರ ಬಳಕೆ ಮಾಡಿದರೆ ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಕೃಷಿ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

#### ರೈತರಿಗೆ ಕೃಷಿ ಇಲಾಖೆಯ ಸಲಹೆಗಳು

* ಅಗತ್ಯ ಪ್ರಮಾಣದ ಗೊಬ್ಬರ ಮಾತ್ರ ಖರೀದಿಸಿ
* ರಸೀದಿ ಪಡೆಯುವುದನ್ನು ಮರೆಯಬೇಡಿ
* ಮಣ್ಣಿನ ಪರೀಕ್ಷೆ ಆಧರಿಸಿ ಗೊಬ್ಬರ ಬಳಕೆ ಮಾಡಿ
* ಅಧಿಕೃತ ಮಾರಾಟ ಕೇಂದ್ರಗಳಿಂದಲೇ ಖರೀದಿಸಿ
* ಸಾವಯವ ಗೊಬ್ಬರ ಬಳಕೆಗೆ ಆದ್ಯತೆ ನೀಡಿ

#### ಕೆ-ಕಿಸಾನ್ ತಂತ್ರಾಂಶದ ಮೂಲಕ ಯೂರಿಯಾ ವಿತರಣೆ

2026-27ನೇ ಸಾಲಿನಿಂದ ಯೂರಿಯಾ ರಸಗೊಬ್ಬರವನ್ನು ಕೆ-ಕಿಸಾನ್ ತಂತ್ರಾಂಶದ ಮೂಲಕವೇ ವಿತರಿಸಲಾಗುತ್ತದೆ. ರೈತರ ಜಮೀನಿನ ವಿಸ್ತೀರ್ಣ ಹಾಗೂ ಬೆಳೆ ಆಧರಿಸಿ ಅಗತ್ಯ ಪ್ರಮಾಣದ ಯೂರಿಯಾ ವಿತರಣೆ ಮಾಡಲಾಗುವುದು ಎಂದು ಇಲಾಖೆ ತಿಳಿಸಿದೆ.

> "ಅಗತ್ಯಕ್ಕಿಂತ ಹೆಚ್ಚು ರಸಗೊಬ್ಬರ ಬಳಕೆ ಮಾಡಿದರೆ ಮಣ್ಣಿನ ಫಲವತ್ತತೆ ಕುಗ್ಗುವುದರ ಜೊತೆಗೆ ರೈತರ ಮೇಲಿನ ಆರ್ಥಿಕ ಹೊರೆಯೂ ಹೆಚ್ಚಾಗುತ್ತದೆ. ಮಣ್ಣಿನ ಪರೀಕ್ಷೆ ಆಧರಿಸಿ ಸಮರ್ಪಕ ಪ್ರಮಾಣದಲ್ಲಿ ಗೊಬ್ಬರ ಬಳಕೆ ಮಾಡಬೇಕು."
> –**ಶ್ರೀಮತಿ ಚೇತನಾ ಪಾಟೀಲ್**, ಜಂಟಿ ಕೃಷಿ ನಿರ್ದೇಶಕರು

### ಸುರಂಗ ಕವಿಯ ಕೊಡುಗೆ ಕನ್ನಡ ಸಾಹಿತ್ಯಕ್ಕೆ ಅನನ್ಯ: ಡಾ. ಸಿ. ನಾಗಭೂಷಣ

# ಪುಲಿಗೆರೆಯ ಸಾಹಿತ್ಯ ವೈಭವ ಅನಾವರಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪುಲಿಗೆರೆಯ ತಿರುಗನ್ನಡ ನಾಡಿನ ಸಾಹಿತ್ಯ ಪರಂಪರೆಯಲ್ಲಿ ಸುರಂಗ ಕವಿಯವರ ಕೊಡುಗೆ ವಿಶಿಷ್ಟವಾಗಿದ್ದು, ಚಂಪೂ ಶೈಲಿಯಲ್ಲಿ ಸಾಹಿತ್ಯ ರಚಿಸಿದ ಈ ಅಸಾಮಾನ್ಯ ಕವಿ ಪುಲಿಗೆರೆಯಲ್ಲಿಯೇ ಹುಟ್ಟಿ ಬೆಳೆದಿದ್ದಾನೆ ಎಂಬುದು ಬಹಳಷ್ಟು ಜನರಿಗೆ ತಿಳಿದಿಲ್ಲ ಎಂದು ಬೆಂಗಳೂರು ವಿವಿಯ ಹಿರಿಯ ಪ್ರಾಧ್ಯಾಪಕ ಡಾ. ಸಿ. ನಾಗಭೂಷಣ ಹೇಳಿದರು.

ಪಟ್ಟಣದ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಸಮುದಾಯ ಭವನದಲ್ಲಿ ನಡೆದ "ಪುಲಿಗೆರೆ ಪರಿಸರದ ಪ್ರಾಚೀನ ಕನ್ನಡ ಸಾಹಿತ್ಯ" ರಾಜ್ಯಮಟ್ಟದ ವಿಚಾರ ಸಂಕಿರಣದಲ್ಲಿ "ಸುರಂಗ ಕವಿಯ ತ್ರಿಶಷ್ಠಿ ಮಹಾಪುರಾಣ" ವಿಷಯ ಕುರಿತು ಉಪನ್ಯಾಸ ನೀಡಿದ ಅವರು, ಕನ್ನಡ ಸಾಹಿತ್ಯದ ಬೆಳವಣಿಗೆಯಲ್ಲಿ ಸುರಂಗ ಕವಿ ತಮ್ಮ ಕಾವ್ಯಗಳ ಮೂಲಕ ವಿಶಿಷ್ಟ ಗುರುತಿಸಿಕೊಂಡಿದ್ದಾರೆ ಎಂದು ಹೇಳಿದರು.

ನಾಡಿನ ಸಂಸ್ಕೃತಿ, ಜನಜೀವನ ಹಾಗೂ ಧಾರ್ಮಿಕ ಮೌಲ್ಯಗಳ ಚಿತ್ರಣವನ್ನು ಜನಪರ ಆಶಯಗಳೊಂದಿಗೆ ಭಕ್ತಿಭಾವದಲ್ಲಿ ಅವರು ಸಾಹಿತ್ಯದಲ್ಲಿ ಪ್ರತಿಬಿಂಬಿಸಿದ್ದಾರೆ. ಸರಳ ಶೈಲಿಯಲ್ಲಿದ್ದರೂ ಗಂಭೀರ ಅರ್ಥವತ್ತತೆಯನ್ನು ಹೊಂದಿರುವ ಅವರ ಸಾಹಿತ್ಯ ಗ್ರಾಮೀಣ ಬದುಕಿನ ನೈಜತೆಯನ್ನು ಕಾವ್ಯ ರೂಪದಲ್ಲಿ ಮೂಡಿಸಿದೆ ಎಂದು ವಿಶ್ಲೇಷಿಸಿದರು.

ಪುಲಿಗೆರೆ ಪರಿಸರದಲ್ಲಿ ತೆರೆಮರೆಗೆ ಸರಿದಿರುವ ಇಂತಹ ಪ್ರಾಚೀನ ಕವಿಗಳ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಅಗತ್ಯವಿದೆ. ಸುರಂಗ ಕವಿಯ ಸಾಹಿತ್ಯವನ್ನು ಸಂಶೋಧನೆಯ ಮೂಲಕ ಇನ್ನಷ್ಟು ಬೆಳಕಿಗೆ ತರುವ ಕೆಲಸ ನಡೆಯಬೇಕು ಎಂದು ಡಾ. ನಾಗಭೂಷಣ ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ವೇದಿಕೆಯಲ್ಲಿ ಡಾ. ಎನ್.ಎಂ. ತಳವಾರ, ಪ್ರೊ. ಆರ್.ಎನ್. ಪಾಟೀಲ, ಡಾ. ರಾಜಶೇಖರ ಇಚ್ಚಂಗಿ, ಲಲಿತಾ ಕೆರಿಮನಿ, ವಿವೇಕಾನಂದಗೌಡ ಪಾಟೀಲ ಹಾಗೂ ಈಶ್ವರ ಮೆಡ್ಲೇರಿ ಉಪಸ್ಥಿತರಿದ್ದರು.

ಡಾ. ಅನ್ನಪೂರ್ಣ ಕಾರ್ಯಕ್ರಮ ನಿರೂಪಿಸಿದರು. ಕು. ಸಪ್ತಮಿ ಗೊರವರ ಸಿತಾರ್ ವಾದನ ಕಾರ್ಯಕ್ರಮಕ್ಕೆ ಮೆರುಗು ತಂದರೆ, ಕು. ಸುಮುಖ ಕುಲಕರ್ಣಿ ತಬಲಾ ಸಾಥ್ ನೀಡಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka